# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 147 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 23–12–2023 ಶನಿವಾರ | ಪುಟ: 4 | ಬೆಲೆ : ರೂ.2–00
Volume - 01 Issue - 147 | Title- Code: KARKAN 28269 | Chitradurga | Date: 23-12-2023 Saturday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

- ಡಿ.24ರಂದು ವಾಲ್ಮೀಕಿ ನಾಯಕ ನೌಕರರ ಸಮಾವೇಶ, ಸಾಧಕರಿಗೆ ಸನ್ಮಾನ 2
- ಡಿ.30ರಂದು ಮೊಳಕಾಲ್ಮುರಿನಲ್ಲಿ ತಾಲ್ಲೂಕುಮಟ್ಟದ ಜನತಾ ದರ್ಶನ 3
- ಸಂಸದ ಸಸ್ಪೆಂಡ್: ಕೇಂದ್ರದ ವಿರುದ್ಧ ಕಾಂಗ್ರೆಸ್ ಪ್ರತಿಭಟನೆ 4



ಸುದ್ದಿ, ಜಾಹಿರಾತಿಗೆ 9686622252


### ಶುಭ ನುಡಿ

ಆಶಾವಾದಿ ಪ್ರತಿಯೊಂದು ಕಠಿಣತೆಯಲ್ಲೂ ಅವಕಾಶವನ್ನು ಹುಡುಕುತ್ತಾನೆ. ಆದರೆ ನಿರಾಶಾವಾದಿ ಪ್ರತಿಯೊಂದು ಅವಕಾಶದಲ್ಲಿ ಕಠಿಣತೆಯನ್ನು ಹುಡುಕುತ್ತಾನೆ. ಬಟ್ಟೆ ಮತ್ತು ಮುಖ ಯಾವಾಗಲೂ ಸುಳ್ಳು ಹೇಳುತ್ತದೆ. ಸಮಯ ಮಾತ್ರ ಮನುಷ್ಯನ ನಿಜ ಮುಖ ತೋರಿಸುತ್ತದೆ.!

» ಶುಭೋದಯ

## ಫಾಸ್ಟ್ ನ್ಯೂಸ್

### ಮುಂದಿನ ಚುನಾವಣೆಗೆ ನಾನು ಆಕಾಂಕ್ಷಿಯಲ್ಲ

» ಚಿತ್ರದುರ್ಗ



ಮುಂಬರುವ ಲೋಕಸಭೆ ಚುನಾವಣೆಯಲ್ಲಿ ನಮ್ಮ ಪಕ್ಷ ಚಿತ್ರದುರ್ಗದಲ್ಲಿ ಗೆಲ್ಲುತ್ತದೆ. ರಾಜ್ಯದ 28 ಕ್ಷೇತ್ರಗಳಲ್ಲಿ ಪಕ್ಷ ಗೆಲ್ಲಿಸಿ ದಾಖಲೆ ಮಾಡಲು ಬಿಜೆಪಿ ಕಾರ್ಯಕರ್ತ ಸಿದ್ಧನಾಗಿದ್ದಾನೆ ಎಂದು ಕೇಂದ್ರ ಸಚಿವ ಹಾಗೂ ಚಿತ್ರದುರ್ಗ ಸಂಸದಎ.ನಾರಾಯಣಸ್ವಾಮಿ ತಿಳಿಸಿದರು. ಚಿತ್ರದುರ್ಗದಲ್ಲಿ ಸುದ್ದಿಗಾರರ ಜೊತೆಗೆ ಮಾತನಾಡಿದ ಅವರು ರಾಜಕಾರಣದಿಂದ ನಾನು ದೂರ ಉಳಿಯ ಬೇಕೆಂದಿದ್ದೇನೆ. ಭ್ರಷ್ಟ ರಾಜಕೀಯ ವ್ಯವಸ್ಥೆಯಲ್ಲಿ ಮುಂದುವರೆಯುವ ರಾಜಕಾರಣಿ ನಾನಲ್ಲ ಭ್ರಷ್ಟಚಾರದ ಕುರ್ಚಿಯ ಪಕ್ಕದಲ್ಲೂ ನಾನು ಕೂರುವುದಿಲ್ಲ. ಆದರೂ ಕುಳಿತಿದ್ದೇನೆ ಎನ್ನುವ ಮೂಲಕ ಅಚ್ಚರಿ ಮೂಡಿಸಿ ಯಾವುದೇ ಚುನಾವಣೆ ಪ್ರಶ್ನೆ ಇಲ್ಲ. ಭವಿಷ್ಯದ ಚುನಾವಣೆಗಳಲ್ಲೂ ಇದೇ ನನ್ನ ನಿರ್ಧಾರ ಎಂದರು. ಮುಂದಿನ ಚುನಾವಣೆಗೆ ನೀವು ಆಕಾಂಕ್ಷಿಯೇ ಎನ್ನುವ ಪ್ರಶ್ನೆಗೆ ಪ್ರತಿಕ್ರಿಯೆ ನೀಡುವಾಗಲೇ ನಾನು ಟಿಕೇಟ್ ಆಕಾಂಕ್ಷಿ ಅಲ್ಲ ಎಂದು ಸ್ಪಷ್ಟಪಡಿಸಿದರು.

ಪುಟ ↘ 2

### ಕೋವಿಡ್ ನಿರ್ವಹಣೆ ಕುರಿತ ಸಭೆಯಲ್ಲಿ ಕೇಂದ್ರ ಸಚಿವ ಎ. ನಾರಾಯಣಸ್ವಾಮಿ ಸೂಚನೆ

# ಜಿಲ್ಲೆಯಲ್ಲಿ ಕೋವಿಡ್ ನಿಯಂತ್ರಣ ಹಾಗೂ ನಿರ್ವಹಣೆಗೆ ವಿಶೇಷ ಕಾರ್ಯ ಯೋಜನೆ

» ಚಿತ್ರದುರ್ಗ

ಜಿಲ್ಲೆಯಲ್ಲಿ ಕೋವಿಡ್ ಹರಡದಂತೆ ಹಾಗೂ ಸಂಭವನೀಯ ಪರಿಸ್ಥಿತಿ ನಿರ್ವಹಣೆಗೆ ಅಗತ್ಯವಿರುವ ಎಲ್ಲ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಬೇಕು, ಹಾಗೂ ಎಲ್ಲ ಸರ್ಕಾರಿ ಮತ್ತು ಖಾಸಗಿ ಆಸ್ಪತ್ರೆಗಳಲ್ಲಿ ನಿರ್ವಹಣೆಗೆ ವೈದ್ಯಕೀಯ ಸೌಲಭ್ಯಗಳ ಸಿದ್ಧತೆಯನ್ನು ಮಾಡಿಕೊಳ್ಳಲು ವಿಶೇಷ ಕಾರ್ಯ ಯೋಜನೆ ರೂಪಿಸುವಂತೆ ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಖಾತೆ ರಾಜ್ಯ ಸಚಿವರು ಹಾಗೂ ಸಂಸದ ಎ. ನಾರಾಯಣಸ್ವಾಮಿ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲೆಯಲ್ಲಿ ಕೋವಿಡ್ ನಿರ್ವಹಣೆ ಕುರಿತಂತೆ ಮುನ್ನೆಚ್ಚರಿಕೆ ಕ್ರಮವಾಗಿ ಸಿದ್ಧತೆಗಳನ್ನು ಕೈಗೊಳ್ಳುವ ಸಂಬಂಧ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಏರ್ಪಡಿಸಿದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕೋವಿಡ್‌ನ ಜೆಎನ್–01 ಹೊಸ ತಳಿ ಕೇರಳದಲ್ಲಿ ಹೆಚ್ಚು ಕಾಣಿಸಿಕೊಂಡಿದ್ದು, ಕರ್ನಾಟಕಕ್ಕೂ ಕಾಲಿಟ್ಟಿದೆ, ಇದರ ಜೊತೆಗೆ ದೇಶದಲ್ಲಿಯೂ ಕೂಡ ವ್ಯಾಪಕವಾಗುವ ಸಾಧ್ಯತೆಗಳಿವೆ. ಹೀಗಾಗಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಇದನ್ನು ಗಂಭೀರವಾಗಿ ಪರಿಗಣಿಸಿದೆ. ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ಕೂಡ ಈ ಬಗ್ಗೆ ಗುರುವಾರದಮದುತಾಂತ್ರಿಕಸಲಹಾಸಮಿತಿ ಸಭೆ ನಡೆಸಿ, ಕೆಲವು ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲು ಸೂಚನೆಗಳನ್ನು ನೀಡಿದ್ದಾರೆ. ರಾಜ್ಯದಲ್ಲಿಯೂ ಕೋವಿಡ್ ನಿಂದ 03 ಸಾವು ಸಂಭವಿಸಿದೆ ಎಂದು ವರದಿ ಬಂದಿದ್ದು, ಸಾವಿಗೆ ಏನೇ ಕಾರಣ ಹೇಳಿದ್ದರೂ, ಈ ಹಿಂದಿನ ಅನುಭವದ ಆಧಾರದಲ್ಲಿ ಇದನ್ನು ನಾವು ಹಗುರವಾಗಿ ಪರಿಗಣಿಸುವಂತಿಲ್ಲ. ಈ ಹಿಂದೆಯೂ ಕೂಡ ನಿಧಾನವಾಗಿ ಕಾಣಿಸಿಕೊಂಡ ಕೋವಿಡ್ ಬಳಿಕ ತೀವ್ರ ಗಂಭೀರ ಪರಿಸ್ಥಿತಿ ಉಂಟು ಮಾಡಿತ್ತು. ಹೀಗಾಗಿ ಈ ಬಾರಿ ನಾವು ನಿರ್ಲಕ್ಷ್ಯ ತೋರುವಂತಿಲ್ಲ. ಆಸ್ಪತ್ರೆಗಳಲ್ಲಿ ದಾಖಲಾಗುವ ಜ್ವರ ಪ್ರಕರಣಗಳಲ್ಲಿ ಕೋವಿಡ್ ಪರೀಕ್ಷೆ ಮಾಡಿಸಬೇಕು, ಹಾಗೂ ಆಯಾ ದಿನದಂದೇ ಫಲಿತಾಂಶ ಸಿಗುವಂತಾಗಬೇಕು ಎಂದರು. ಸರ್ಕಾರಿ ಮತ್ತು ಖಾಸಗಿ ಆಸ್ಪತ್ರೆಗಳಲ್ಲಿ ಸಂಭವನೀಯ ಕೋವಿಡ್ ಸೋಂಕಿತರ ಚಿಕಿತ್ಸೆಗೆ ಪ್ರತ್ಯೇಕ ವಾರ್ಡ್‌ಗಳು, ಐಸಿಯು, ಬೆಡ್‌ಗಳು, ವೆಂಟಿಲೇಟರ್‌ಗಳು ಹಾಗೂ ಆಕ್ಸಿಜನ್ ವ್ಯವಸ್ಥೆ, ಮತ್ತು ಅಗತ್ಯ ಔಷಧಿ ಉಪಕರಣಗಳನ್ನು ಸಿದ್ಧವಾಗಿರಿಸಿಕೊಳ್ಳಬೇಕು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಜಿಲ್ಲೆಯಲ್ಲಿನ ಎಲ್ಲ ಸರ್ಕಾರಿ ಆಸ್ಪತ್ರೆಗಳಿಗೆ ಭೇಟಿ ನೀಡಿ, ಬೆಡ್, ಆಕ್ಸಿಜನ್ ಸಿಲಿಂಡರ್, ವೆಂಟಿಲೇಟರ್, ಆಕ್ಸಿಜನ್ ಘಟಕಗಳ ಪರಿಶೀಲನೆ ಮಾಡಬೇಕು, ಒಂದು ವೇಳೆ ಯಾವುದೇ ದುರಸ್ತಿಗಳಿದ್ದಲ್ಲಿ ಕೂಡಲೆ ಮಾಡಿಸಬೇಕು, ಅಗತ್ಯ ಔಷಧಿ ದಾಸ್ತಾನು ಮಾಡಿಕೊಳ್ಳಬೇಕು. ಸಿಎಸ್‌ಆರ್ ನಿಧಿಯಡಿ ಈ ಹಿಂದೆ ಮೆಡಿಕಲ್ ಆಕ್ಸಿಜನ್ ಘಟಕಗಳನ್ನು ಸ್ಥಾಪಿಸಲಾಗಿದ್ದು, ಈವರೆಗೂ ಅವು ಸಂಬಂಧಿಸಿದ ಆಸ್ಪತ್ರೆಗಳಿಗೆ ಹಸ್ತಾಂತರವಾಗಿಲ್ಲ, ಕೆಲವೆಡೆ ಸಂಪರ್ಕವನ್ನೇ ನೀಡಿಲ್ಲ, ಹೀಗಾಗಿ ಕೂಡಲೆ ಇದರ ಬಗ್ಗೆ ಕ್ರಮ ಕೈಗೊಂಡು, ವರದಿ ಸಲ್ಲಿಸಬೇಕು. ವೆಂಟಿಲೇಟರ್‌ಗಳ ಬಳಕೆ ದೀರ್ಘ ಕಾಲದಿಂದ ಮಾಡದೇ ಇರುವುದರಿಂದ ಇವುಗಳ ಸೆನ್ಸಾರ್ ಉಪಕರಣ ಹಾಳಾಗುತ್ತದೆ ಎಂದು ವೈದ್ಯರು ತಿಳಿಸಿದ್ದು, ಸೆನ್ಸಾರ್‌ಗಳ ಖರೀದಿಸಿ ದುರಸ್ತಿಗೊಳಿಸುವ ಬಗ್ಗೆ ಶೀಘ್ರ ಕ್ರಮ ಕೈಗೊಳ್ಳಬೇಕು. ಒಟ್ಟಾರೆ ಕೋವಿಡ್ ನಿಯಂತ್ರಣ ಮತ್ತು ನಿರ್ವಹಣೆಗೆ ಅಗತ್ಯವಿರುವ ಅನುದಾನದ ಬಗ್ಗೆ ಕಾರ್ಯ ಯೋಜನೆ ಸಿದ್ಧಪಡಿಸಿ ಸಲ್ಲಿಸುವಂತೆ ಸಚಿವರು ಅಧಿಕಾರಿಗಳಿಗೆ ಸೂಚನೆ ನೀಡಿದರು.



> ಕೇರಳದ ಶಬರಿಮಲೆಗೆ ಹೋಗಿ ಬರುವ ಅಯ್ಯಪ್ಪಸ್ವಾಮಿ ಭಕ್ತಾದಿಗಳು, ತೀವ್ರ ಎಚ್ಚರಿಕೆ ವಹಿಸಬೇಕು.ಕೇರಳದಲ್ಲಿ ಕೋವಿಡ್ ಪ್ರಕರಣಗಳು ಹೆಚ್ಚು ವರದಿಯಾಗುತ್ತಿರುವ ಕಾರಣ, ಶಬರಿಮಲೆಗೆ ಹೋಗಿ ಬಂದವರು ಯಾವುದೇ ರೋಗ ಲಕ್ಷಣಗಳು ಇಲ್ಲದಿದ್ದರೂ, ಕೆಲವು ದಿನಗಳ ಕಾಲ ಸಾರ್ವಜನಿಕರ ಮಧ್ಯೆ ಬೆರೆಯಬಾರದು, ಸ್ವಯಂ ಪ್ರೇರಣೆಯಿಂದ ಕೆಲವು ದಿನ ಹೋಂ ಕ್ವಾರಂಟೈನ್ ಆಗಿರಬೇಕು ಎಂದು ಭಕ್ತಾದಿಗಳಲ್ಲಿ ಮನವಿ ಮಾಡುತ್ತೇನೆ.
>
> ■ **ಕೆ.ಎಸ್.ನವೀನ್, ವಿಧಾನ ಪರಿಷತ್ ಸದಸ್ಯ**

ಪುಟ ↘ 2

## ಪ್ರಮುಖ ಸುದ್ದಿ

# ಎಲ್ಲಾ ಜಿಲ್ಲೆಗಳಲ್ಲೂ ಕ್ಯಾನ್ಸರ್ ಆಸ್ಪತ್ರೆ ಆರಂಭಿಸುವ ಅಗತ್ಯವಿದೆ: ಸಿದ್ದರಾಮಯ್ಯ

» ಮೈಸೂರು

ದುಡಿಯುವ ವರ್ಗಗಳಿಗೆ ಚಿಕಿತ್ಸೆ ಭಾರ ಆಗದೆ ಉಚಿತವಾಗಿ ಚಿಕಿತ್ಸೆ ಸಿಗಬೇಕು ಎನ್ನುವುದು ನಮ್ಮ ಸರ್ಕಾರದ ಕಾಳಜಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ನುಡಿದರು.

ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆಯ ಫೆರಿಫೆರಲ್ ಕ್ಯಾನ್ಸರ್ ಕೇಂದ್ರದ ಕಟ್ಟಡದ ಶಂಕುಸ್ಥಾಪನೆ ಮತ್ತು ವೈದ್ಯಕೀಯ ಸಂಶೋಧನಾ ಸಂಸ್ಥೆಯ ಬಾಲಕಿಯರ ವಿದ್ಯಾರ್ಥಿ ಉದ್ಘಾಟನೆಯನ್ನು ನೆರವೇರಿಸಿ ಮಾತನಾಡಿದರು.

ಮೈಸೂರಿಗೆ ಜಿಲ್ಲಾ ಆಸ್ಪತ್ರೆ, ಟ್ರಾಮಾ ಸೆಂಟರ್, ಕಿದ್ವಾಯಿ ಆಸ್ಪತ್ರೆ ಕೊಟ್ಟಿದ್ದು ನಾನೇ. ಈಗಾಗಲೇ 40 ಕೋಟಿ ಕೂಡ ಕೊಟ್ಟಿದ್ದೇವೆ. ಇನ್ನೂ 50 ಕೋಟಿ ಕೊಡ್ತೀವಿ. ನೆಫ್ರೋಲಜಿ ಕೇಂದ್ರ ಬೇಕು ಎನ್ನುವ ಬೇಡಿಕೆಯೂ ಇದೆ. ಅದನ್ನೂ ಗಂಭೀರವಾಗಿ ಪರಿಗಣಿಸಿ ಅಗತ್ಯ ಕ್ರಮ ಕೈಗೊಳ್ಳುತ್ತೇವೆ ಎಂದರು.

ಡಾ.ಯತೀಂದ್ರ ಅವರ ಕೋರಿಕೆಯಂತೆ ಮೈಸೂರಿನಲ್ಲಿ ಬೋನ್ ನ್ಯಾರೋ ಚಿಕಿತ್ಸಾ ಸೌಲಭ್ಯ ಒದಗಿಸುತ್ತೇವೆ ಎಂದರು.

ಬೆಂಗಳೂರಿನ ನಂತರ ವೇಗವಾಗಿ ಬೆಳೆಯುತ್ತಿರುವ ನಗರ ಮೈಸೂರು. ಹೀಗಾಗಿ ಅಗತ್ಯ ಎಲ್ಲಾ ರೀತಿಯ ವೈದ್ಯಕೀಯ ಸವಲತ್ತುಗಳನ್ನೂ ಮೈಸೂರಿಗೆ ಒದಗಿಸಬೇಕಾಗಿದ್ದು ಇದಕ್ಕೆ ನಾನು ಬದ್ದವಾಗಿದ್ದೇನೆ ಎಂದರು.

ಬಡವರಿಗೆ, ದುಡಿಯುವ ವರ್ಗಗಳಿಗೆ ಚಿಕಿತ್ಸೆ ಭಾರ ಆಗಬಾರದು. ಉಚಿತ ಅಥವಾ ಕಡಿಮೆ ಖರ್ಚಿನಲ್ಲಿ ಇವರಿಗೆ ಆರೋಗ್ಯ, ಚಿಕಿತ್ಸೆ ಸಿಗಬೇಕು ಎನ್ನುವುದು ನಮ್ಮ ಸರ್ಕಾರದ ಕಾಳಜಿ.

ನಮ್ಮ ಸರ್ಕಾರ ಇರುವಾಗ ಮೈಸೂರು ನಗರಕ್ಕೆ ಅಗತ್ಯ ಇರುವ ಎಲ್ಲಾ ನೆರವನ್ನೂ ಒದಗಿಸುತ್ತೇವೆ. ಪಾರಂಪರಿಕ ನಗರದ ಹೆಮ್ಮೆಯನ್ನು ನಾವು ಉಳಿಸುತ್ತೇವೆ. ಮೈಸೂರು ಜಿಲ್ಲೆಯ ಜನರ ಋಣ ತೀರಿಸಲು ನಾವು ಬದ್ಧರಾಗಿದ್ದೇವೆ ಎಂದರು.

ಚಾಮರಾಜ ಕ್ಷೇತ್ರದ ಶಾಸಕರಾದ ಕೆ.ಹರೀಶ್ ಗೌಡ ಅವರು ಅಧ್ಯಕ್ಷತೆ ವಹಿಸಿದ್ದರು. ವೈದ್ಯಕೀಯ ಶಿಕ್ಷಣ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.



- **ಎಲ್ಲಾ ವಯೋಮಾನದವರಿಗೂ ಕ್ಯಾನ್ಸರ್ ಬರುತ್ತಿರುವುದು ಕಾಳಜಿ ವಹಿಸಬೇಕಾದ ಸಂಗತಿ: ಸಿಎಂ**
- **ದುಡಿಯುವ ವರ್ಗಗಳಿಗೆ ಚಿಕಿತ್ಸೆ ಹೊರೆ ಆಗದೆ ಉಚಿತವಾಗಿ ಚಿಕಿತ್ಸೆ ಸಿಗಬೇಕು ಎನ್ನುವುದು ನಮ್ಮ ಸರ್ಕಾರದ ಕಾಳಜಿ: ಮುಖ್ಯಮಂತ್ರಿ ಸಿದ್ದರಾಮಯ್ಯ**
- **ಮೈಸೂರು ಜಿಲ್ಲೆಯ ಜನರ ಋಣ ತೀರಿಸೋಕೆ ನಾವು ಬದ್ಧರಾಗಿದ್ದೇವೆ**

# ಬರಪರಿಹಾರ: ನಾಳೆ ಅಮಿತ್ ಷಾ ಅಧ್ಯಕ್ಷತೆಯ ಸಭೆಯಲ್ಲಿ ತೀರ್ಮಾನ: ಮುಖ್ಯಮಂತ್ರಿ ಸಿದ್ದರಾಮಯ್ಯ

**ಮೈಸೂರು:** ದೆಹಲಿಯಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಹಾಗೂ ಗೃಹ ಸಚಿವ ಅಮಿತ್ ಷಾ ಅವರನ್ನು ಭೇಟಿಯಾಗಿ ರಾಜ್ಯದ ಬರ ಪರಿಸ್ಥಿತಿ ಕುರಿತು ವಿವರಿಸಲಾಗಿದ್ದು, ಡಿಸೆಂಬರ್ 23 ರಂದು ಅಮಿತ್ ಷಾ ಅವರ ಅಧ್ಯಕ್ಷತೆಯ ಉನ್ನತ ಮಟ್ಟದ ಸಮಿತಿಯ ಸಭೆಯಲ್ಲಿ ಪರಿಹಾರ ಬಿಡುಗಡೆ ಕುರಿತು ತೀರ್ಮಾನವಾಗಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು. ಅವರು ಇಂದು ಮೈಸೂರಿನಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದರು.ಬರಪರಿಹಾರ ಸೇರಿದಂತೆ ರಾಜ್ಯದ ಬೇಡಿಕೆಗಳಿಗೆ ಸಕಾರಾತ್ಮಕವಾಗಿ ಸ್ಪಂದಿಸಿದ್ದು, ಅವುಗಳನ್ನು ಕೇಂದ್ರ ಸರ್ಕಾರ ಈಡೇರಿಸುವ ಭರವಸೆ ಇದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಆಶಾಭಾವ ವ್ಯಕ್ತಪಡಿಸಿದರು.ನವದೆಹಲಿಯಲ್ಲಿ ಪ್ರಧಾನಿ ಹಾಗೂ ಕೇಂದ್ರ ಗೃಹ ಸಚಿವರ ಭೇಟಿ ಬಗ್ಗೆ ಪ್ರತಿಕ್ರಿಯೆ ನೀಡಿ, ರಾಜ್ಯದ ಮನವಿಗೆ ಸಕಾರಾತ್ಮಕ ಸ್ಪಂದನೆ ದೊರಕಿದೆ.

ಪುಟ ↘ 2




## ಫಾಸ್ಟ್ ನ್ಯೂಸ್

### ಗಾಂಜಾ ಮಾರಾಟ; ವ್ಯಕ್ತಿ ವಶ

» **ಚಳ್ಳಕೆರೆ**

ನಗರದ ಸೋಮಗುದ್ದು ಗ್ರಾಮದ ಸೇತುವೆ ಬಳಿ ಗಾಂಜಾ ಮಾರಾಟ ಮಾಡುತ್ತಿದ್ದ ಸೋಮಗುದ್ದು ಗ್ರಾಮದ ಸಿದ್ದಪ್ಪ ಎಂಬವವರನ್ನು ಪೊಲೀಸರು ವಶಕ್ಕೆ ಪಡೆದು ವಿಚಾರಣೆ ನಡೆಸಿದ್ದಾರೆ. ಖಚಿತ ಮಾಹಿತಿ ಮೇರೆಗೆ ಗುರುವಾರ ಮಧ್ಯಾಹ್ನ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಸಿದ್ದಪ್ಪನ ಬಳಿ ಸುಮಾರು 260ಗ್ರಾಂ ಗಾಂಜಾವಿದ್ದು, ವಶಪಡಿಸಿಕೊಂಡ ಪೊಲೀಸರು ಆತನ ಮೇಲೆ ಪ್ರಕರಣ ದಾಖಲಿಸಿ ತನಿಖೆ ಕೈಗೊಂಡಿದ್ದಾರೆ.

### ಬೆಳೆ ನಷ್ಟ ಪರಿಹಾರ ಖಾತೆಗೆ ಜಮೆ; ಜಂಟಿ ಕೃಷಿ ನಿರ್ದೇಶಕ ಮಂಜುನಾಥ



» **ಚಳ್ಳಕೆರೆ**

ತಾಲ್ಲೂಕಿನಾದ್ಯಂತ ರೈತರಿಗೆ ಬೆಳೆಪರಿಹಾರ ನೀಡುವ ನಿಟ್ಟಿನಲ್ಲಿ ಈಗಾಗಲೇ ಕಂದಾಯ, ಕೃಷಿ ಇಲಾಖೆ ಅಧಿಕಾರಿಗಳು ಜಂಟಿಸಭೆ ನಡೆಸಿದ್ದು, ಜಿಪಿಎಸ್‌ಮೂಲಕ ಆಯಾ ರೈತರ ನಷ್ಟದ ಅಂದಾಜಿನ ಬಗ್ಗೆ ಸರ್ಕಾರಕ್ಕೆ ವರದಿ ಕಳಿಸಲಾಗಿದೆ. ಪರಿಹಾರದ ದರ ನೇರವಾಗಿ ರೈತ ಖಾತೆಗೆ ಜಮಾವಾಗಲಿದೆ ಎಂದು ಜಿಲ್ಲಾ ಜಂಟಿ ಕೃಷಿ ನಿರ್ದೇಶಕ ಮಂಜುನಾಥ ತಿಳಿಸಿದರು. ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಕೃಷಿ ಇಲಾಖೆ ಅಧಿಕಾರಿಗಳು, ಕಂದಾಯಾಧಿಕಾರಿ, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಗ್ರಾಮ ಲೆಕ್ಕಾಧಿಕಾರಿ, ಗ್ರಾಮ ಸಹಾಯಕರ ಸಭೆಯಲ್ಲಿ ಭಾಗವಹಿಸಿ ಮಾತನಾಡಿದರು. ಈಗಾಗಲೇ ಸರ್ಕಾರಕ್ಕೆ ರೈತರ ಬೆಳೆನಷ್ಟದ ಬಗ್ಗೆ ನಿಖರ ಮಾಹಿತಿ ಕಳಿಸಲಾಗಿದೆ. ರೂಟ್‌ಸೈಟ್ ಮೂಲಕ ರೈತರಿಗೆ ಆಗಿರುವ ನಷ್ಟದ ಬಗ್ಗೆ ಅಂದಾಜು ಪಟ್ಟಿ ಸಿದ್ದಮಾಡಲಾಗಿದೆ. ಪ್ರತಿಯೊಬ್ಬ ರೈತರಿಗೆ ಎಫ್‌ಐಡಿ ಸಂಖ್ಯೆ ನಮೂದಾಗಿದ್ದು ಅದರ ಆಧಾರದ ಮೇಲೆಯೇ ಪರಿಹಾರವನ್ನು ಸಹ ನಿಗದಿ ಮಾಡಿ ನೇರವಾಗಿ ರೈತರ ಖಾತೆಗೆ ಜಮಾ ಮಾಡುವ ವ್ಯವಸ್ಥೆ ಮಾಡಿದೆ. ಈ ಬಗ್ಗೆ ಯಾವ ರೈತರೂ ಆತಂಕ ಪಡುವ ವಿಚಾರವಿಲ್ಲ. ಸರ್ಕಾರ ನೇರವಾಗಿ ರೈತರಿಗೆ ಬೆಳೆಪರಿಹಾರ ನೀಡಲಿದ್ದು, ಯಾವ ರೈತರೂ ಆತಂಕಕ್ಕೆ ಒಳಗಾಗಬಾರದು ಎಂದು ಮನವಿ ಮಾಡಿದರು, ಈ ಬಗ್ಗೆ ಅಧಿಕಾರಿಗಳು ರೈತರಲ್ಲಿ ಜಾಗೃತಿ ಮೂಡಿಸಿ ಎಂದು ಸಲಹೆ ನೀಡಿದರು. ಸಭೆಯಲ್ಲಿ ಜಿಲ್ಲಾ ಸಹಾಯಕ ಜಂಟಿ ನಿರ್ದೇಶಕ ಪ್ರಭಾಕರ್, ತಹಶೀಲ್ದಾರ್ ರೇಹಾನ್ ಪಾಷ, ಕಂದಾಯಾಧಿಕಾರಿ ಲಿಂಗೇಗೌಡ, ಕೃಷಿ ಅಧಿಕಾರಿ ತಿಪ್ಪೇಸ್ವಾಮಿ ಮುಂತಾದವರು ಉಪಸ್ಥಿತರಿದ್ದರು.

### ನಾಳೆ ಅಮಿತ್ ಷಾ ಅಧ್ಯಕ್ಷತೆಯ ಸಭೆಯಲ್ಲಿ ತೀರ್ಮಾನ: ಮುಖ್ಯಮಂತ್ರಿ

» **ಮೊದಲ ಪುಟದಿಂದ**

ಕೇಂದ್ರ ಗೃಹ ಸಚಿವ ಅಮಿತ್ ಶಾ ಉನ್ನತ ಮಟ್ಟದ ಸಮಿತಿಯ ಅಧ್ಯಕ್ಷರಾಗಿದ್ದು, ಅವರು ಬರಪರಿಸ್ಥಿತಿಯ ಬಗ್ಗೆ ನಾಳೆ 23 ರಂದು ಸಭೆ ನಡೆಸುವುದಾಗಿ ಭರವಸೆ ನೀಡಿದ್ದಾರೆ.

ಪ್ರಧಾನ ಮಂತ್ರಿಯವರನ್ನು ಭೇಟಿಯಾದ ಸಂದರ್ಭದಲ್ಲಿ ಬರ ಪರಿಸ್ಥಿತಿಯ ಜೊತೆಗೆ ಮಹಾದಾಯಿ , ಮೇಕೆದಾಟು, ಭದ್ರಾಮೇಲ್ದಂಡೆ ಯೋಜನೆಗಳ ಬಗ್ಗೆ, ಹಾಗೂ ನರೇಗಾ ಯೋಜನೆಯಡಿ ಮಾನವ ದಿನಗಳನ್ನು 150 ದಿನಗಳಿಗೆ ವಿಸ್ತರಿಸುವ ಬಗ್ಗೆ ಶೀಘ್ರ ತೀರ್ಮಾನ ಕೈಗೊಳ್ಳಲು ಮನವಿ ಮಾಡಲಾಗಿದೆ. ಪ್ರಧಾನಿ ಮೋದಿಯವರು ಕರ್ನಾಟಕ ಬರ ಪರಿಸ್ಥಿತಿ ಹಾಗೂ ಮೇಲಿನ ಬೇಡಿಕೆಗಳ ಬಗ್ಗೆ ಸಮಾಧಾನಚಿತ್ತರಾಗಿ ಆಲಿಸಿ, ಸಂಬಂಧಪಟ್ಟ ಸಚಿವರ ಜೊತೆ ಚರ್ಚಿಸಿ ಕ್ರಮ ಕೈಗೊಳ್ಳುವುದಾಗಿ ತಿಳಿಸಿದ್ದಾರೆ ಎಂದರು.

**ಕೋವಿಡ್ ಜನರು ಆತಂಕ ಪಡಬೇಕಾಗಿಲ್ಲ:** ಮೈಸೂರಿನಲ್ಲಿ 6 ಜನರಿಗೆ ಕೋವಿಡ್ ತಗುಲಿದ್ದು, ಅವರಿಗೆ ಇತರೆ ಸಂಬಂಧಿಸಿದ ಕಾಯಿಲೆಯಿಂದ ಬಳಲುತ್ತಿದ್ದಾರೆ. ಭವಿಷ್ಯದಲ್ಲಿ ಪ್ರವಾಸಿ ತಾಣಗಳನ್ನು ಬಂದ್ ಮಾಡುವ ಸಾಧ್ಯತೆ ಇದೆಯೇ ಎಂಬುದಕ್ಕೆ ಪ್ರತಿಕ್ರಿಯೆ ನೀಡಿ, ಈಗ ಸಧ್ಯದ ಪರಿಸ್ಥಿತಿಯಲ್ಲಿ ಯಾರೂ ಕೂಡ ಆತಂಕ ಪಡುವ ಅಗತ್ಯವಿಲ್ಲ. ಆದರೆ ಎಚ್ಚರಿಕೆಯಿಂದ ಇರಬೇಕಾಗುತ್ತದೆ. ತಾಂತ್ರಿಕ ಸಲಹಾ ಸಮಿತಿಯ ಸಲಹೆಗಳನ್ನು ಕಡ್ಡಾಯವಾಗಿ ಪಾಲಿಸಬೇಕು ಎಂದರು.

### ಅರ್ಜಿ ಆಹ್ವಾನ

» **ಹೊಸದುರ್ಗ**

2023-24 ನೇ ಸಾಲಿನ ಆತ್ಮ ಯೋಜನೆಯಡಿ ತಾಲ್ಲೂಕು ಮಟ್ಟದ ಶ್ರೇಷ್ಠ ಕೃಷಿಕ ಪ್ರಶಸ್ತಿ ಅರ್ಜಿ ಆಹ್ವಾನಿಸಲಾಗಿದ್ದು ಕೃಷಿ, ತೋಟಗಾರಿಕೆ, ಹೈನುಗಾರಿಕೆ, ಕೃಷಿ ಅರಣ್ಯ ಮತ್ತು ಸಮಗ್ರ ಕೃಷಿ ಪದ್ಧತಿ ಅಳವಡಿಸಿಕೊಂಡಿರುವ ರೈತರು ಮತ್ತು ರೈತ ಮಹಿಳೆಯರು ಅರ್ಜಿ ಸಲ್ಲಿಸಬಹುದು ಎಂದು ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ ಸಿ.ಎನ್.ಈಶ ಪ್ರಕಟಣೆಯಲ್ಲಿ ತಿಳಿಸಿದ್ದು ಅರ್ಜಿಗಳನ್ನು ಸಲ್ಲಿಸಲು ಡಿಸೆಂಬರ್ 30 ಕೊನೆಯ ದಿನವಾಗಿದೆ.

# ಮಕ್ಕಳಿಗೆ ಧರ್ಮಪ್ರಜ್ಞೆ, ಸಂಸ್ಕಾರ ಕಲಿಸಿ

» **ಚಿತ್ರದುರ್ಗ**

ಮಕ್ಕಳಿಗೆ ಧರ್ಮಪ್ರಜ್ಞೆ, ಸಂಸ್ಕಾರ ಕಲಿಸಿ ವಿವೇಕದಿಂದಬೆಳೆಸುವಕರ್ತವ್ಯಪ್ರತಿಯೊಬ್ಬ ತಂದೆ-ತಾಯಿಯರ ತಲೆ ಮೇಲಿದೆ ಎಂದು ಗೌರಿಗದ್ದೆ ಅವಧೂತ ಆಶ್ರಮದ ವಿನಯ್ ಗುರೂಜಿ ತಿಳಿಸಿದರು.

ಚಳ್ಳಕೆರೆ ಗೇಟ್‌ನಲ್ಲಿರುವ ದೇವರಾಜ ಅರಸ್ ಶಿಕ್ಷಣ ಸಂಸ್ಥೆಯಲ್ಲಿ 40 ವರ್ಷಗಳ ಶೈಕ್ಷಣಿಕ ಸಾರ್ಥಕತೆಗಾಗಿ ನಡೆಯುತ್ತಿರುವ ಡೆಸ್ಟಿನಿ-2023 ಕಾರ್ಯಕ್ರಮವನ್ನು ಗುರುವಾರ ಉದ್ಘಾಟಿಸಿ ಮಾತನಾಡಿದರು.

ಒಳ್ಳೆಯ ರಾಜಕಾರಣಿ, ಚಿಂತನಶೀಲ ಮನಸ್ಸು, ಅಹಂಕಾರವಿಲ್ಲದೆ ಬದುಕುವ ಜೀವನ ಶೈಲಿ ಈ ಶಿಕ್ಷಣ ಸಂಸ್ಥೆಯ ಸಂಸ್ಥಾಪಕ ಡಾ.ಎಂ.ಚಂದ್ರಪ್ಪನವರ ಕುಟುಂಬಕ್ಕೆ ಭಗವಂತ ಕರುಣಿಸಿದ್ದಾನೆ. ಒಂದು ಕುಟುಂಬದಂತೆ ಶಿಕ್ಷಣ ಸಂಸ್ಥೆಯನ್ನು ನಡೆಸಿಕೊಂಡು ಹೋಗುವುದು ಸುಲಭದ ಕೆಲಸವಲ್ಲ. ದುರ್ಗದ ಅದಿದೇವತೆ ಏಕನಾಥೇಶ್ವರಿಯ ರಕ್ಷಣೆ ಈ ಊರಿನ ಪ್ರತಿಯೊಬ್ಬರ ಮೇಲೂ ಇದೆ. ಹಿಂದುಳಿದ ವರ್ಗದ ದೇವರು ಎನ್ನುವವರು ಯಾರಾದರೂ ಇದ್ದಾರೆಂದರೆ ಸಂವಿಧಾನಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಬಿಟ್ಟರೆ ದಿವಂಗತ ಡಿ.ದೇವರಾಜ ಅರಸು ಎನ್ನುವುದನ್ನು ಬದುಕಿ ತೋರಿಸುತ್ತಿರುವವರು ಡಾ.ಎಂ.ಚಂದ್ರಪ್ಪ ಎಂದು ಗುಣಗಾನ ಮಾಡಿದರು.



ಭಾಷೆ, ಜೀವನ ಎನ್ನವುದು ವ್ಯಾಪಾರವಾಗಿದೆ. ಹೊರದೇಶಕ್ಕೆ ಹೋದರೆ ಭಾರತಕ್ಕೆ ಏನಾದರೂ ಗೌರವ ಸಿಗುತ್ತಿದೆ ಎನ್ನುವುದಾದರೆ ನಮ್ಮ ದೇಶದ ಪ್ರಧಾನಿ ನರೇಂದ್ರಮೋದಿ ಕಾರಣ. ಕಾರ್ಯಕ್ರಮದಲ್ಲಿ ವೆಸ್ಟ್ರನ್ ಸಂಸ್ಕೃತಿಗಿಂತ ನಮ್ಮ ರಾಜ್ಯದ ಸಂಸ್ಕೃತಿಯನ್ನು ಬಿಂಬಿಸಲಾಗುತ್ತಿರುವುದು ನಿಜಕ್ಕೂ ಸಂತೋಷದ ಸಂಗತಿ. ಮಮ್ಮಿ ಡ್ಯಾಡಿ ಎಂದು ಮಕ್ಕಳಿಗೆ ಹೇಳಿಕೊಡುವ ಬದಲು ಅಪ್ಪ ಅಮ್ಮ ಎನ್ನುವುದನ್ನು ಕಲಿಸಿ. ಜೀವನಕ್ಕೆ ವಿದ್ಯೆ ಬೇಕು. ಜೊತೆಗೆ ಭಾವನೆ ಸಂಸ್ಕಾರ ಮುಖ್ಯ ಎಂದು ಹೇಳಿದರು.

ದೇವರಾಜ್ ಅರಸ್ ಶಿಕ್ಷಣ ಸಂಸ್ಥೆಯ ಸಂಸ್ಥಾಪಕ ಡಾ.ಎಂ.ಚಂದ್ರಪ್ಪ ಮಾತನಾಡಿ ನನ್ನಧರ್ಮಪತ್ನಿಶ್ರೀಮತಿ ಚಂದ್ರಕಲಾರವರ ಆಸೆಯಂತೆ ಪ್ರತಿಷ್ಠಿತ ಜಾಗದಲ್ಲಿ ದೇವರಾಜ್ ಅರಸ್ ಶಿಕ್ಷಣ ಸಂಸ್ಥೆಯನ್ನು ಆರಂಭಿಸಿ ಮಧ್ಯಕರ್ನಾಟಕದ ಬಯಲುಸೀಮೆ ಹಿಂದುಳಿದ ಚಿತ್ರದುರ್ಗ ಜಿಲ್ಲೆಯ ಬಡ ಮಕ್ಕಳಿಗೆ ಶಿಕ್ಷಣ ಸಿಗಲಿ ಎನ್ನುವ ಉದ್ದೇಶ ನಮ್ಮದು. ಹಣ ಗಳಿಸಬೇಕೆಂಬ ಆಸೆಯಿದ್ದಿದ್ದರೆ ಬೆಂಗಳೂರಿನಲ್ಲಿ ಇಂತಹ ಶಿಕ್ಷಣ ಸಂಸ್ಥೆಯನ್ನು ತೆರೆಯುತ್ತಿದ್ದೆವು ಎಂದರು.ನಮ್ಮ ಸಂಸ್ಥೆಯ ಶಿಕ್ಷಕರು ಹಾಗೂ ನೌಕರ ವರ್ಗದವರನ್ನು ಕುಟುಂಬದ ಸದಸ್ಯರಂತೆ ಕಾಣುತ್ತಿದ್ದೇವೆ. ವೃದ್ದಾಶ್ರಮಗಳು ಜಾಸ್ತಿಯಾಗುತ್ತಿರುವುದಕ್ಕೆ ತಂದೆತಾಯಿಗಳೆ ಕಾರಣ. ಮಕ್ಕಳಿಗೆ ಉತ್ತಮ ಸಂಸ್ಕಾರ ಕಲಿಸಬೇಕಿದೆ. ಮಕ್ಕಳಿಗಾಗಿ ಆಸ್ತಿ ಸಂಪಾದಿಸುವುದಕ್ಕಿಂತ ಗುಣಮಟ್ಟದ ಶಿಕ್ಷಣ ಹಾಗೂ ಸಂಸ್ಕಾರವನ್ನು ಹೇಳಿಕೊಡಬೇಕು. 28 ನೇ ವಯಸ್ಸಿನಲ್ಲಿಯೇ ಶಿಕ್ಷಣ ಸಂಸ್ಥೆಯನ್ನು ಆರಂಭಿಸಿದೆ. ಅದಕ್ಕೆ ನನ್ನ ತಂದೆ-ತಾಯಿ ನನಗೆ ಕೊಟ್ಟ ಸಂಸ್ಕಾರ ಕಾರಣ ಎಂದು ಸ್ಮರಿಸಿದ ಡಾ.ಎಂ.ಚಂದ್ರಪ್ಪ ಎಂಟು ಹಂತಸ್ತಿನ ಕಟ್ಟಡದಲ್ಲಿ 346 ಕ್ಲಾಸ್ ರೂಂಗಳಿವೆ. ಗುಣ ಮಟ್ಟದ ಕಟ್ಟಡ ಕಟ್ಟಿದ್ದೇವೆ. ಯಾವುದೆ ಸ್ವಾರ್ಥವಿಟ್ಟುಕೊಂಡಿಲ್ಲ. ಬಡಮಕ್ಕಳು ಇದರ ಪ್ರಯೋಜನ ಪಡೆದುಕೊಂಡು ಶಿಕ್ಷಣವಂತರಾಗಿ ಎಂದು ವಿನಂತಿಸಿದರು.

ದೇವರಾಜ್ ಅರಸ್ ಶಿಕ್ಷಣ ಸಂಸ್ಥೆಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎಂ.ಸಿ.ರಘುಚಂದನ್ ಮಾತನಾಡಿ ನನ್ನ ತಂದೆ ಎಂ.ಚಂದ್ರಪ್ಪನವರು 1983-84 ರಲ್ಲಿ ಪುಟ್ಟ ಪುಟ್ಟ ಹೆಜ್ಜೆಯಿಟ್ಟುಕೊಂಡು ಆರಂಭಿಸಿದ ದೇವರಾಜ್ ಅರಸ್ ಶಿಕ್ಷಣ ಸಂಸ್ಥೆ ದೊಡ್ಡ ಹೆಮ್ಮರವಾಗಿ ಬೆಳೆದು ಸಾವಿರಾರು ವಿದ್ಯಾರ್ಥಿಗಳಿಗೆ ಶಿಕ್ಷಣ ನೀಡುತ್ತಿದೆ. ಎಸ್.ಎಲ್.ವಿ.ನರ್ಸಿಂಗ್ ಕಾಲೇಜು 2023 ಕ್ಕೆ 25 ವರ್ಷಗಳನ್ನು ಪೂರೈಸಿದೆ. ಕೇರಳ, ತಮಿಳುನಾಡು, ಪಶ್ಚಿಮ ಬಂಗಾಳ, ಮಹಾರಾಷ್ಟ್ರ, ರಾಜಸ್ಥಾನದಿಂದ ವಿದ್ಯಾರ್ಥಿಗಳು ಬಂದು ಇಲ್ಲಿ ಪ್ರವೇಶ ಪಡೆಯುತ್ತಾರೆ. ಹಿಂದುಳಿದ ಜಿಲ್ಲೆಯ ಬಡ ಮಕ್ಕಳಿಗೆ ಅತ್ಯುತ್ತಮ ಶಿಕ್ಷಣ ನೀಡಬೇಕೆಂಬುದು ನನ್ನ ತಾಯಿಯ ಕನಸಾಗಿತ್ತು ಎಂದು ಮನದಾಳದ ಇಂಗಿತ ವ್ಯಕ್ತಪಡಿಸಿದರು. 2010-11 ರಲ್ಲಿ ಸಿ.ಬಿ.ಎಸ್.ಇ. ಶಾಲೆ ತೆರೆದ ಕೀರ್ತಿ ಇಂಡಿಯನ್ ಇಂಟರ್‌ನ್ಯಾಷನಲ್ ಸ್ಕೂಲ್‌ಗೆ ಸಲ್ಲುತ್ತದೆ. ಇದು ಇಷ್ಟಕ್ಕೆ ಸೀಮಿತವಾಗಬಾರದೆಂದು ಸ್ಟೇಟ್ ಸಿಲೆಬಸ್ಸನ್ನು 2013-14 ರಲ್ಲಿ ಆರಂಭಿಸಲಾಯಿತು. 2015-16 ರಲ್ಲಿ ಪದವಿಪೂರ್ವ ಶಿಕ್ಷಣವು ಪ್ರಾರಂಭಗೊಂಡಿತು. ಆಗ ಇಡಿ ರಾಜ್ಯಕ್ಕೆ ಒಂಬತ್ತನೆ ರ್‍ಯಾಂಕ್ ಗಳಿಸಿದ ಕೀರ್ತಿ ನಮ್ಮ ಸಂಸ್ಥೆಗೆ ಧಕ್ಕಿತು ಎಂದು ಸಂತಸಗೊಂಡರು.

# ಹೊರಗುತ್ತಿಗೆ ಪೌರಕಾರ್ಮಿಕರ ಬೇಡಿಕೆ ಪರಿಹರಿಸಲು ಶಾಸಕರ ಸೂಚನೆ

» **ಚಳ್ಳಕೆರೆ**

ಇಲ್ಲಿನ ನಗರಸಭೆ ಮುಂಭಾಗದಲ್ಲಿ ಸೇವೆಖಾಯಾಂತಿ ಸೇರಿದಂತೆ ಹಲವಾರು ಬೇಡಿಕೆ ಈಡೇರಿಸುವಂತೆ ಒತ್ತಾಯಿಸಿ ನಗರಸಭೆಯ ಹೊರಗುತ್ತಿಗೆ ಪೌರಕಾರ್ಮಿಕರು ಕಳೆದ ಎರಡು ದಿನಗಳಿಂದ ಮುಷ್ಕರ ನಡೆಸುತ್ತಿದ್ದು ಗುರುವಾರ ಪೌರಾಯುಕ್ತ ಸಿ.ಚಂದ್ರಪ್ಪ ಮುಷ್ಕರದಲ್ಲಿ ಪಾಲ್ಗೊಂಡಿದ್ದ ಹೊರಗುತ್ತಿಗೆ ಪೌರಕಾರ್ಮಿಕರೊಂದಿಗೆ ಸೌಹಾರ್ದ ಚರ್ಚೆ ನಡೆಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ತಾವು ಪೌರಕಾರ್ಮಿಕರಂತೆ ತಮಗೂ ನೇರಪಾವತಿ ಮಾಡುವುದೂ ಸೇರಿದಂತೆ ಹಲವಾರು ಬೇಡಿಕೆಗಳ ಬಗ್ಗೆ ತಮ್ಮ ಕರ್ತವ್ಯಗಳನ್ನು ಬದಿಗೊತ್ತಿ ಮುಷ್ಕರದಲ್ಲಿ ಪಾಲ್ಗೊಂಡಿದ್ದೀರ, ನಿಮ್ಮ ಮನವಿಯನ್ನು ಈಗಾಗಲೇ ಮುಂದಿನ ಕಾರ್ಯಪಾಲನೆಗಾಗಿ ಜಿಲ್ಲಾಧಿಕಾರಿಗಳಿಗೆ ಕಳಿಸಿಕೊಡಲಾಗಿದೆ. ಅಲ್ಲಿಂದ ಆದೇಶ ಬಂದಮೇಲೆ ಈ ಬಗ್ಗೆ ಕ್ರಮ ಕೈಗೊಳ್ಳಲಾಗುವುದು. ತಾವು ಮುಷ್ಕರವನ್ನು ಸ್ಥಗಿತಗೊಳಿಸಿ ಸಾರ್ವಜನಿಕರ ಹಿತದೃಷ್ಠಿಯಿಂದ ಕೆಲಸದಲ್ಲಿ ಪಾಲ್ಗೊಳ್ಳುವಂತೆ ಮನವಿ ಮಾಡಿದರು.ಉಪಾಧ್ಯಕ್ಷ ಕೆ.ಪೆನ್ನೇಶ್ ಮಾತನಾಡಿ, ನಮ್ಮ ಮೂಲಭೂತ ಬೇಡಿಕೆಗಳ ಬಗ್ಗೆ ಈಗಾಗಲೇ ಮಾನ್ಯ ಜಿಲ್ಲಾಧಿಕಾರಿಗಳು ಹಾಗೂ ಪೌರಾಯುಕ್ತರಿಗೆ ಮನವಿ ನೀಡಿದೆ. ನಮ್ಮ ಬೇಡಿಕೆ ಈಡೇರಿಸುವ ತನಕ ನಾವು ಮುಷ್ಕರದಲ್ಲಿ ಪಾಲ್ಗೊಳ್ಳುತ್ತೇವೆ. ಯಾವುದೇ ಕಾರಣಕ್ಕೂ ನಾವು ಮುಷ್ಕರದಿಂದ ಹಿಂದೆ ಸರಿಯುವುದಿಲ್ಲ. ಹೊರಗುತ್ತಿಗೆದಾರರ ಕಾರ್ಮಿಕರ ಸಂಘದ ಪದಾಧಿಕಾರಿಗಳು ಸಂಘಟಿತರಾಗಿ ಹೋರಾಟ ನಡೆಸುತ್ತಿದ್ದು, ನಮ್ಮ ಸೇವೆ ಖಾಯಾಂತಿಗೆ ತಾವೆಲ್ಲರೂ ಪ್ರಯತ್ನ ನಡೆಸಬೇಕೆಂದರು.



ಶಾಸಕರ ಭರವಸೆ : ಕಳೆದ ಸುಮಾರು ಎರಡು ದಿನಗಳಿಂದ ಕೆಲಸಗಳನ್ನು ಸ್ಥಗಿತಗೊಳಿಸಿ ಮುಷ್ಕರದಲ್ಲಿ ಪಾಲ್ಗೊಂಡಿರುವ ಪೌರಕಾರ್ಮಿಕರ ಸಮಸ್ಯೆಯನ್ನು ಈಡೇರಿಸುವಂತೆ ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ಪೌರಾಯುಕ್ತ ಸಿ.ಚಂದ್ರಪ್ಪನವರಿಗೆ ಮಾಹಿತಿ ನೀಡಿದ್ದಾರೆ. ಡಿ.26ರ ಮಂಗಳವಾರ ಶಾಸಕರೇ ನಗರಸಭೆ ಕಚೇರಿಗೆ ಆಗಮಿಸಿ ಹೊರಗುತ್ತಿಗೆ ಪೌರಕಾರ್ಮಿಕರ ಸಮಸ್ಯೆಗಳ ಬಗ್ಗೆ ಚರ್ಚೆ ನಡೆಸುವುದಾಗಿ ದೂರವಾಣಿ ಮೂಲಕ ತಿಳಿಸಿದ್ದಾರೆಂದರು.

ಆರೋಗ್ಯ ನಿರೀಕ್ಷಕರಾದ ಗೀತಾಕುಮಾರಿ, ದಾದಾಪೀರ್, ಹೊರಗುತ್ತಿಗೆ ಪೌರಕಾರ್ಮಿಕರ ಸಂಘದ ತಾಲ್ಲೂಕು ಅಧ್ಯಕ್ಷ ಶ್ರೀನಿವಾಸ್, ಪ್ರಸನ್ನಕುಮಾರ್, ಪಾಪಣ್ಣ, ಹನುಮಂತರಾಯ, ಪ್ರತಾಪ, ಧಿವಾಕರ, ಮಂಜುನಾಥ, ದುರುಗೇಶಪ್ಪ ಮುಂತಾದವರು ಉಪಸ್ಥಿತರಿದ್ದರು.

## ಜಿಲ್ಲೆಯಲ್ಲಿ ಕೋವಿಡ್ ನಿಯಂತ್ರಣ, ನಿರ್ವಹಣೆಗೆ ವಿಶೇಷ ಕಾರ್ಯ ಯೋಜನೆ

» **ಮೊದಲ ಪುಟದಿಂದ**

ಚಿತ್ರದುರ್ಗ ಜಿಲ್ಲಾ ಆಸ್ಪತ್ರೆಯ ನಿರ್ವಹಣೆ ಬಗ್ಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದ ಸಚಿವರು, ಜಿಲ್ಲಾಸ್ಪತ್ರೆಯಲ್ಲಿ ಸಂತೆಯ ರೀತಿ ವಾತಾವರಣ ಇರುವುದನ್ನು ಗಮನಿಸಿಸಲಾಗಿದೆ, ಸ್ವಚ್ಛತೆಯ ಕೊರತೆ ಇದೆ. ಪರಿಸ್ಥಿತಿ ಈ ರೀತಿ ಆದರೆ, ಕೋವಿಡ್‌ನ ನಿರ್ವಹಣೆ ತುಂಬಾ ಕಷ್ಟಕರವಾಗುತ್ತದೆ. ಕೂಡಲೆ ಜಿಲ್ಲಾಸ್ಪತ್ರೆಯ ಜಿಲ್ಲಾ ಶಸ್ತ್ರಚಿಕಿತ್ಸಕರು ಕ್ರಮ ಕೈಗೊಂಡು, ಅಲ್ಲಿನ ಪರಿಸ್ಥಿತಿ ಸರಿಪಡಿಸಬೇಕು ಎಂದು ತಾಕೀತು ಮಾಡಿದರು.ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ ಅವರು ಮಾತನಾಡಿ, ಜಿಲ್ಲೆಯಲ್ಲಿ ಶಂಕಾಸ್ಪದ ಪ್ರಕರಣಗಳಿಗೆ ಸಂಬಂಧಿಸಿದಂತೆ 72 ಜನರಿಗೆ ಕೋವಿಡ್ ಪರೀಕ್ಷೆ ಮಾಡಲಾಗಿದ್ದು, ಎಲ್ಲವೂ ನೆಗೆಟಿವ್ ಬಂದಿದೆ. ಮುಂದೆಯೂ ಕೋವಿಡ್ ಟೆಸ್ಟ್ ಸಂಖ್ಯೆಯನ್ನು ಹೆಚ್ಚು ಹೆಚ್ಚು ಕೈಗೊಳ್ಳುವಂತೆ ಆರೋಗ್ಯ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದರು. ಡಿಹೆಚ್‌ಓ ಡಾ. ರೇಣುಪ್ರಸಾದ್ ಮಾತನಾಡಿ, ಕೋವಿಡ್ ಜೆಎನ್-01 ಹೊಸ ತಳಿ ಬಗ್ಗೆ ಸಾರ್ವಜನಿಕರು ಆತಂಕಪಡುವ ಅಗತ್ಯವಿಲ್ಲ, ಆದರೆ ಮುನ್ನೆಚ್ಚರಿಕಾ ಕ್ರಮಗಳಾದ ಮಾಸ್ಕ್ ಧರಿಸುವುದು, ಕೈಗೊಳ್ಳನ್ನು ಆಗಾಗ್ಗೆ ಸಾಬೂನಿನಿಂದ ಸ್ವಚ್ಛಗೊಳಿಸುವುದು, ರೋಗ ಲಕ್ಷಣಗಳಿದ್ದವರು ಸಾರ್ವಜನಿಕರೊಂದಿಗೆ ಬೆರೆಯಬಾರದು. ವೈದ್ಯರನ್ನು ಭೇಟಿ ಮಾಡಿ ಚಿಕಿತ್ಸೆ ಪಡೆದುಕೊಳ್ಳಬೇಕು ಎಂದರು.

ಜಿಲ್ಲೆಯ ಸರ್ಕಾರಿ ಆಸ್ಪತ್ರೆಗಳಲ್ಲಿ ಒಟ್ಟು 312 ಐಸೋಲೇಷನ್ ಬೆಡ್‌ಗಳು, ಆಕ್ಸಿಜನ್ ನೀಡಬಹುದಾದ ಸಂಪರ್ಕವಿರುವ 245 ಬೆಡ್‌ಗಳು, ಹಾಗೂ ಇತರೆ 102 ಬೆಡ್ ಸೇರಿದಂತೆ ಒಟ್ಟು 660 ಬೆಡ್‌ಗಳು ಲಭ್ಯವಿದೆ, ಖಾಸಗಿ ಆಸ್ಪತ್ರೆಗಳಲ್ಲಿ 800 ಬೆಡ್‌ಗಳಿವೆ. ಸರ್ಕಾರಿ ಆಸ್ಪತ್ರೆಗಳಲ್ಲಿ 62 ವೆಂಟಿಲೇಟರ್‌ಗಳಿದ್ದು, ಇದರಲ್ಲಿ 23 ಮಾತ್ರ ಕಾರ್ಯ ನಿರ್ವಹಿಸುತ್ತಿವೆ. 303 ಆಕ್ಸಿಜನ್ ಕಾನ್ಸಂಟ್ರೇಟರ್ಸ್, 606 ಆಕಿಜನ್ ಸಿಲಿಂಡರ್‌ಗಳು ಲಭ್ಯವಿದೆ. ವೈದ್ಯಕೀಯ ಆಕ್ಸಿಜನ್ ಪ್ಲಾಂಟ್‌ಗೆ ಸಂಬಂಧಿಸಿದಂತೆ ಜಿಲ್ಲಾಸ್ಪತ್ರೆಯಲ್ಲಿ 500 ಲೀ., 300 ಲೀ. ಹಾಗೂ 1000 ಲೀ. ಸಾಮರ್ಥ್ಯದ ಪ್ಲಾಂಟ್, ಹೊಸದುರ್ಗದಲ್ಲಿ 500 ಲೀ., ಹಿರಿಯೂರಿನಲ್ಲಿ 250 ಲೀ. ಸಾಮರ್ಥ್ಯದ ಆಕ್ಸಿಜನ್ ಪ್ಲಾಂಟ್ ಇನ್ಸ್ಟಾಲೇಶನ್ ಪೂರ್ಣಗೊಂಡಿದೆ. ಆದರೆ ಮೊಳಕಾಲ್ಮೂರು, ಚಳ್ಳಕೆರೆ ಹಾಗೂ ಹೊಳಲ್ಕೆರೆಯಲ್ಲಿ ಪೂರ್ಣಗೊಂಡಿಲ್ಲ ಎಂದರು. ಇದಕ್ಕೆ ಪ್ರತಿಕ್ರಿಯಿಸಿದ ಸಚಿವರು ಮೊಳಕಾಲ್ಮೂರು, ಚಳ್ಳಕೆರೆ ಹಾಗೂ ಹೊಳಲ್ಕೆರೆಯಲ್ಲಿ ತ್ವರಿತವಾಗಿ ಇನ್ಸ್ಟಾಲೇಶನ್ ಕಾರ್ಯ ಪೂರ್ಣಗೊಳಿಸಬೇಕು, ಹಾಗೂ ಎಲ್ಲ ಘಟಕಗಳು ಆಯಾ ಆಸ್ಪತ್ರೆಗಳಿಗೆ ಹಸ್ತಾಂತರವಾಗುವಂತೆ ಕ್ರಮ ಕೈಗೊಳ್ಳಬೇಕು, ಇದಕ್ಕೆ ಯಾವುದಾದರೂ ಅಡ್ಡಿ ಇದ್ದಲ್ಲಿ ತಮ್ಮ ಗಮನಕ್ಕೆ ತರುವಂತೆ ಸೂಚನೆ ನೀಡಿದರು. ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಧರ್ಮೇಂದ್ರ ಕುಮಾರ್ ಮೀನಾ, ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ರವೀಂದ್ರ, ಸೇರಿದಂತೆ ಆರೋಗ್ಯ ಇಲಾಖೆಯ ವಿವಿಧ ಕಾರ್ಯಕ್ರಮ ಅನುಷ್ಠಾನಾಧಿಕಾರಿಗಳು, ತಾಲ್ಲೂಕು ಆಸ್ಪತ್ರೆಗಳ ವೈದ್ಯಾಧಿಕಾರಿಗಳು ಭಾಗವಹಿಸಿದ್ದರು.

## ಲಿಂಗಸುಗೂರಿನಲ್ಲಿ ರಾಜ್ಯ ಮಟ್ಟದ 3ನೇ ವೈಜ್ಞಾನಿಕ ಸಮ್ಮೇಳನ

**ಚಿತ್ರದುರ್ಗ:** ಡಿಸೆಂಬರ್ 29 ಹಾಗೂ 30 ರಂದು ರಾಯಚೂರು ಜಿಲ್ಲೆಯ ಲಿಂಗಸುಗೂರಿನ ಕಾಲೇಜು ಮೈದಾನದಲ್ಲಿ ಸತೀಶ್ ಜಾರಕಿಹೊಳಿಯವರ ಸರ್ವಾಧ್ಯಕ್ಷತೆಯಲ್ಲಿ ರಾಜ್ಯ ಮಟ್ಟದ 3ನೇ ವೈಜ್ಞಾನಿಕ ಸಮ್ಮೇಳನ ಹಾಗೂ ರಾಷ್ಟ್ರಕವಿ ಕುವೆಂಪು ದಿನಾಚರಣೆ, ವೈಚಾರಿಕ ದಿನಾಚರಣೆಯನ್ನು ಆಯೋಜಿಸಲಾಗಿದೆ ಎಂದು ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತಿನ ಜಿಲ್ಲಾ ಘಟಕದ ಅಧ್ಯಕ್ಷದ ನಾಗರಾಜ್ ಸಂಗಮ್ ತಿಳಿಸಿದ್ದಾರೆ. ಚಿತ್ರದುರ್ಗ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತು ಕಳೆದ ಮೂರು ವರ್ಷಗಳಿಂದ ರಾಜ್ಯ ಮಟ್ಟದಲ್ಲಿ ನಿರಂತರವಾಗಿ ಕಾರ್ಯಕ್ರಮಗಳನ್ನು ಆಯೋಜಿಸುತ್ತ ಬಂದಿದ್ದು ಪ್ರತಿ ವರ್ಷ ರಾಜ್ಯ ಮಟ್ಟದ ವೈಜ್ಞಾನಿಕ ಸಮ್ಮೇಳನವನ್ನು ಆಯೋಜಿಸುತ್ತ ಬಂದಿದೆ. ಡಿ29 ಶುಕ್ರವಾರ ಬೆಳಗ್ಗೆ 10ಕ್ಕೆ ರಾಜ್ಯದ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರು ಕಾರ್ಯಕ್ರಮವನ್ನು ಉದ್ಘಾಟಿಸುವರು.

## ಪ್ರಮುಖ ಸುದ್ದಿ

### ವಾಲ್ಮೀಕಿ ನಾಯಕ ನೌಕರರ ಕ್ಷೇಮಾಭಿವೃದ್ಧಿ ಮತ್ತು ಸಾಂಸ್ಕೃತಿಕ ಸಂಘದ ಅಧ್ಯಕ್ಷ ಡಾ.ಹೆಚ್.ಗುಡ್ಡದೇಶ್ವರಪ್ಪ ಮಾಹಿತಿ

# ಡಿ.24ರಂದು ವಾಲ್ಮೀಕಿ ನಾಯಕ ನೌಕರರ ಸಮಾವೇಶ

» **ಚಿತ್ರದುರ್ಗ**

ಚಿತ್ರದುರ್ಗ ವಾಲ್ಮೀಕಿ ನಾಯಕ ನೌಕರರ ಕ್ಷೇಮಾಭಿವೃದ್ಧಿ ಮತ್ತು ಸಾಂಸ್ಕೃತಿಕ ಸಂಘದ ವತಿಯಿಂದ ಇದೇ ಡಿಸೆಂಬರ್ 24ರಂದು ಬೆಳಿಗ್ಗೆ 10.30ಕ್ಕೆ ಚಿತ್ರದುರ್ಗ ನಗರದ ತರಾಸು ರಂಗಮಂದಿರದಲ್ಲಿ ಚಿತ್ರದುರ್ಗ ವಾಲ್ಮೀಕಿ ನಾಯಕ ನೌಕರರ ಸಮಾವೇಶ ಹಾಗೂ ಪ್ರತಿಭಾ ಪುರಸ್ಕಾರ ಸಮಾರಂಭ ಹಮ್ಮಿಕೊಳ್ಳಲಾಗಿದೆ ಎಂದು ವಾಲ್ಮೀಕಿ ನಾಯಕ ನೌಕರರ ಕ್ಷೇಮಾಭಿವೃದ್ಧಿ ಮತ್ತು ಸಾಂಸ್ಕೃತಿಕ ಸಂಘದ ಅಧ್ಯಕ್ಷ ಡಾ.ಹೆಚ್. ಗುಡ್ಡದೇಶ್ವರಪ್ಪ ಹೇಳಿದರು.

ನಗರದ ಪತ್ರಕರ್ತರ ಭವನದಲ್ಲಿ ಗುರುವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ವಾಲ್ಮೀಕಿ ನಾಯಕ ನೌಕರರ ಕ್ಷೇಮಾಭಿವೃದ್ಧಿ ಮತ್ತು ಸಾಂಸ್ಕೃತಿಕ ಸಂಘದ ವತಿಯಿಂದ ಕಳೆದ 12 ವರ್ಷಗಳಿಂದ ಸಮಾಜದ ಸಾಧಕರನ್ನು ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗುರುತಿಸಿ, ಪ್ರೋತ್ಸಾಹಿಸಿ ಕೆಲಸವನ್ನು ನಿರಂತರವಾಗಿ ಮಾಡಿಕೊಂಡು ಬರಲಾಗುತ್ತಿದೆ ಎಂದು ಮಾಹಿತಿ ನೀಡಿದರು. 2022-23ನೇ ಸಾಲಿನಲ್ಲಿ ಎ□□ಎ□□ಎ□□ಸಿ ಮತ್ತು ಪಿಯುಸಿ, ಬಿಎ, ಬಿಕಾಂ, ಬಿಎಸ್ಸಿ, ಬಿಸಿಎ, ಬಿಎ□□ಡಬ್ಲ್ಯೂ, ಇಂಜಿನಿಯರಿಂಗ್, ಎಂಬಿಬಿಎಸ್, ಇತರೆ ಪದವಿ ಪರೀಕ್ಷೆಯಲ್ಲಿ ಹೆಚ್ಚು ಅಂಕಗಳಿಸಿದ ಪಿಹೆ□□ಡಿ ಪದವಿ ಪಡೆದ, ನಾಯಕ ಸಮಾಜದ ಪ್ರತಿಭಾವಂತರನ್ನು ಅಭಿನಂದಿಸಲು ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನಿಸಲಾಗಿತ್ತು. ಸುಮಾರು 200ಕ್ಕೂ ಹೆಚ್ಚು ಅರ್ಜಿಗಳು ಬಂದಿದ್ದವು. ಇದರಲ್ಲಿ 96 ಜನ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಗುವುದು ಎಂದು ತಿಳಿಸಿದ ಅವರು, ಮಾಜಿ ಸಂಸದರು ಹಾಗೂ ವಿಶ್ರಾಂತ ಹೈಕೋರ್ಟ್ ನ್ಯಾಯಮೂರ್ತಿ ಎನ್.ವೈ.ಹನುಮಂತಪ್ಪ ಅವರಿಗೆ 2013ನೇ ಸಾಲಿನ ಜೀವಮಾನ ಸಾಧನ ಪ್ರಶಸ್ತಿ ಪ್ರಧಾನ ಮಾಡಲಾಗುವುದು. ಇದರ ಜೊತೆಗೆ ಸಮಾಜದ ಸಾಧಕರಾದ ನಿವೃತ್ತ ಡಿಐಜಿ ಎಂ.ಎನ್.ನಾಗರಾಜ್, ಹಿರಿಯ ಪತ್ರಕರ್ತರು ಹಾಗೂ ಜಿಲ್ಲಾ ವಾಲ್ಮೀಕಿ ಪ್ರಶಸ್ತಿ ಪುರಸ್ಕೃತ ಎಂ.ಎನ್. ಅಹೋಬಲಪತಿ ಹಾಗೂ ಉದ್ಯಮಿ ಹಾಗೂ ಜಿಲ್ಲಾ ವಾಲ್ಮೀಕಿ ಪ್ರಶಸ್ತಿ ಪುರಸ್ಕೃತ ಪಿ.ವಿ.ಅರುಣ್ ಕುಮಾರ್ ಅವರನ್ನು ಸನ್ಮಾನಿಸಲಾಗುವುದು ಎಂದರು.



ಕಾರ್ಯಕ್ರಮದಲ್ಲಿವಾಲ್ಮೀಕಿಗುರುಪೀಠದ ಪ್ರಸನ್ನಾನಂದಪುರಿ ಸ್ವಾಮೀಜಿ ದಿವ್ಯಸಾನಿಧ್ಯ ವಹಿಸುವರು. ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಉದ್ಘಾಟನೆ ನೆರವೇರಿಸುವರು. ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಜೀವಮಾನ ಸಾಧನ ಪ್ರಶಸ್ತಿ ಪ್ರಧಾನ ಮಾಡುವರು. ಸಹಕಾರ ಸಚಿವ ಕೆ.ಎನ್.ರಾಜಣ್ಣ ವಾಲ್ಮೀಕಿ ಭಾವಚಿತ್ರ ಅನಾವರಣ ಮಾಡುವರು. ಪರಿಶಿಷ್ಟ ಪಂಗಡಗಳ ಕಲ್ಯಾಣ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವ ನಾಗೇಂದ್ರ ಸಮಾಜದ ಸಾಧಕರಿಗೆ ಸನ್ಮಾನ ಮಾಡುವರು. ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಜನಪ್ರತಿನಿಧಿಗಳು ಹಾಗೂ ಸಮಾಜದ ಗಣ್ಯರು ಪ್ರತಿಭಾ ಪುರಸ್ಕಾರ ನೀಡಿ ಗೌರವಿಸುವರು. ಚಿತ್ರದುರ್ಗ ನಾಯಕ ಸಮಾಜದ ಅಧ್ಯಕ್ಷ ಬಿ.ಕಾಂತರಾಜು ಮಾತನಾಡಿ, ಚಿತ್ರದುರ್ಗ ವಾಲ್ಮೀಕಿ ನಾಯಕ ನೌಕರರ ಸಮಾವೇಶ ಹಾಗೂ ಪ್ರತಿಭಾ ಪುರಸ್ಕಾರ ಸಮಾರಂಭಕ್ಕೆ ಸಮಾಜದ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಯಶಸ್ವಿಗೊಳಿಸಬೇಕು ಎಂದರು.

ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾ ನಾಯಕ ಸಮಾಜದ ಅಧ್ಯಕ್ಷ ಹೆಚ್.ಜೆ.ಕೃಷ್ಣಮೂರ್ತಿ, ವಾಲ್ಮೀಕಿ ನಾಯಕ ನೌಕರರ ಕ್ಷೇಮಾಭಿವೃದ್ಧಿ ಮತ್ತು ಸಾಂಸ್ಕೃತಿಕ ಸಂಘದ ಪ್ರಧಾನ ಕಾರ್ಯದರ್ಶಿ ಆರ್.ನಾಗೇಂದ್ರಬಾಬು, ಖಜಾಂಚಿಎಸ್.ಬಿ.ರವಿಶಂಕರ್,ಉಪಾಧ್ಯಕ್ಷ ಜೆ.ಎಸ್.ರವಿಕುಮಾರ್, ಜಂಟಿ ಕಾರ್ಯ ದರ್ಶಿಗಳಾದ ಕೆ.ನಾಗರಾಜ್‌ಇದ್ದರು.

## ಫಾಸ್ಟ್ ನ್ಯೂಸ್

### ಡಿ.30ರಂದು ಮೊಳಕಾಲ್ಮುರಿನಲ್ಲಿ ತಾಲ್ಲೂಕುಮಟ್ಟದ ಜನತಾ ದರ್ಶನ

» ಚಿತ್ರದುರ್ಗ

ಜಿಲ್ಲಾಧಿಕಾರಿ ದಿವ್ಯಪ್ರಭು ಜಿಆರ್‌ಜೆ ನೇತೃತ್ವದಲ್ಲಿ ಇದೇ ಡಿಸೆಂಬರ್ 30ರಂದು ಬೆಳಿಗ್ಗೆ 10.30ಕ್ಕೆ ಮೊಳಕಾಲ್ಮುರು ಪಟ್ಟಣದ ಗುರುಭವನದಲ್ಲಿ ತಾಲ್ಲೂಕು ಮಟ್ಟದ "ಜನತಾ ದರ್ಶನ" ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಜಿಲ್ಲಾ ಉಸ್ತುವಾರಿ ಸಚಿವರ ನೇತೃತ್ವದಲ್ಲಿ ಪ್ರತಿ ತಿಂಗಳು ಜಿಲ್ಲಾ ಮಟ್ಟದ ಜನತಾ ದರ್ಶನ ಕಾರ್ಯಕ್ರಮ ಹಾಗೂ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಪ್ರತಿ 15 ದಿನಗಳಿಗೊಮ್ಮೆ ತಾಲ್ಲೂಕು ಮಟ್ಟದ ಜನತಾ ದರ್ಶನ ಕಾರ್ಯಕ್ರಮ ಹಮ್ಮಿಕೊಂಡು, ಜನರ ಅಹವಾಲು ಆಲಿಸಿ ಸಮಸ್ಯೆಗಳಿಗೆ ಪರಿಹಾರೋಪಾಯಗಳನ್ನು ಒದಗಿಸುವ ನಿಟ್ಟಿನಲ್ಲಿ ಸೂಕ್ತ ಕ್ರಮವಹಿಸಲಾಗುತ್ತದೆ. ಸಾರ್ವಜನಿಕರು ತಾಲ್ಲೂಕು ಮಟ್ಟದ ಜನತಾ ದರ್ಶನದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ತಮ್ಮ ಅಹವಾಲುಗಳನ್ನು ಸಲ್ಲಿಸಬಹುದು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ ತಿಳಿಸಿದ್ದಾರೆ.

### ರೂ.20 ಸಾವಿರ ಮೊತ್ತದ ಗಾಂಜಾ ವಶ: ಆರೋಪಿ ಬಂಧನ

» ದಾವಣಗೆರೆ

ಅಬಕಾರಿ ತಂಡ ಹೊನ್ನಾಳಿ ಪಟ್ಟಣದ ಮಾರಿಕೊಪ್ಪ ರಸ್ತೆಯಲ್ಲಿ ಡಿ.19 ರಂದು ದಾಳಿ ನಡೆಸಿ ದ್ವಿಚಕ್ರ ವಾಹನದಲ್ಲಿ ಅನಧಿಕೃತವಾಗಿ ಮಾರಾಟಮಾಡುತ್ತಿದ್ದ ರೂ.20 ಸಾವಿರ ಮೊತ್ತದ ಗಾಂಜಾ ವಶಪಡಿಸಿಕೊಂಡು ಆರೋಪಿಯನ್ನು ಬಂಧಿಸಿದೆ. ಹೊನ್ನಾಳಿ ಪಟ್ಟಣದ ಮಾರಿಕೊಪ್ಪ ರಸ್ತೆ ಮತ್ತು ಬಾರ್ ಲೈನ್ ರಸ್ತೆಗಳು ಸಂಪರ್ಕಿಸುವ ವಿದ್ಯುತ್ ಕಂಬದ ತಿರುವಿನ ಬಳಿ ಮೊಹಮದ್ ಸಾದತ್, ಕರೋಂಖಾನ್ ಎಂಬಾತ ದ್ವಿಚಕ್ರ ವಾಹನದಲ್ಲಿ ಅಕ್ರಮವಾಗಿ 145 ಗ್ರಾಂ ಎಲೆ, ಸೊಪ್ಪು, ಹೂವು, ಬೀಜ, ಒಣಗಿದಕಡ್ಡಿ ಮಿಶ್ರಿತವಾದ ಒಣ ಗಾಂಜಾವನ್ನು ಮಾರಾಟ ಮಾಡಲು ಸಾಗಾಣಿಕೆ ಮಾಡುವ ಸಮಯದಲ್ಲಿ ಪತ್ತೆ ಹಚ್ಚಿ ವಾಹನ ಮತ್ತು ಗಾಂಜಾವನ್ನು ಜಪ್ತಿ ಮಾಡಿಕೊಂಡು ಪ್ರಕರಣ ದಾಖಲಿಸಲಾಗಿದೆ. ಪ್ರಕರಣದಲ್ಲಿ ಎನ್ ಡಿ ಪಿ ಎಸ್ ಪದಾರ್ಥಗಳ ಅಂದಾಜು ರೂ.20,000 ಮೊತ್ತದ ಗಾಂಜಾ ವಶಪಡಿಸಿಕೊಳ್ಳಲಾಗಿದೆ. ಹೊಸಪೇಟೆ ವಿಭಾಗದ ಅಬಕಾರಿ ಜಂಟಿ ಆಯುಕ್ತರ ನಿರ್ದೇಶನದ ಮೇರೆಗೆ, ಅಬಕಾರಿ ಉಪ ಆಯುಕ್ತೆ ಸ್ವಪ್ನ.ಆರ್.ಎಸ್ ಮಾರ್ಗದರ್ಶನದಲ್ಲಿ ಅಬಕಾರಿ ಉಪ ಅಧೀಕ್ಷಕ ಮುರುಡೇಶ್.ಎಸ್.ಆರ್, ಹಾಗೂ ಇತರರು ದಾಳಿ ನಡೆಸಿದ್ದರು.

### ರೈತರಿಗಾಗಿ ಪಶು ಸಂಗೋಪನಾ ತರಬೇತಿ

» ದಾವಣಗೆರೆ

ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ವತಿಯಿಂದ ನಗರದ ಪಿ.ಬಿ.ರಸ್ತೆಯ ಅರುಣ ಚಿತ್ರಮಂದಿರದ ಎದುರಿನ ಪಶು ಆಸ್ಪತ್ರೆ ಅವರಣದಲ್ಲಿರುವ ಪಶುವೈದ್ಯಕೀಯ ತರಬೇತಿ ಕೇಂದ್ರದಲ್ಲಿ ಡಿ. 27, 28 ರಂದು ಕುರಿ ಮತ್ತು ಮೇಕೆ ಸಾಗಾಣಿಕೆ ತರಬೇತಿ ಮತ್ತು ಡಿ. 29, 30 ರಂದು ಆಧುನಿಕ ಹೈನುಗಾರಿಕೆ ತರಬೇತಿ ಶಿಬಿರವನ್ನು ಆಯೋಜಿಸಲಾಗಿದೆ.ತರಬೇತಿಯಲ್ಲಿ ಭಾಗವಹಿಸುವ ರೈತರು ಆಧಾರ್ ಕಾರ್ಡ್ ಜೆರಾಕ್ಸ್, 2 ಪಾಸ್‌ಪೋರ್ಟ್ ಸೈಜ್ ಫೋಟೋ ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರು ಜಾತಿ ಪ್ರಮಾಣ ಪತ್ರ ಜೆರಾಕ್ಸ್‌ನೊಂದಿಗೆ ತರಬೇತಿಗೆ ಹಾಜರಾಗಬೇಕು.ತರಬೇತಿಯಲ್ಲಿ ಯಾವುದೇ ಪ್ರೋತ್ಸಾಹಧನ ಮತ್ತು ಭತ್ಯೆಗಳನ್ನು ನೀಡಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರ ದಾವಣಗೆರೆ ದೂ. ಸಂ 08192-233787ಗೆ ಸಂಪರ್ಕಿಸಲು ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರದ ಪಶು ವೈದ್ಯಾಧಿಕಾರಿ ತಿಳಿಸಿದ್ದಾರೆ.

### ನ್ಯಾಷನಲ್‌ಖೋ-ಖೋ ಚಾಂಪಿಯನ್‌ಶಿಪ್‌ಗೆ ಕ್ರೀಡಾ ವಸತಿ ನಿಲಯದ ಕ್ರೀಡಾಪಟುಗಳು ಆಯ್ಕೆ

» ದಾವಣಗೆರೆ




ಛತ್ತೀಸ್‌ಘಡದ ರಾಯಪುರದಲ್ಲಿ ನಡೆಯುವ 42ನೇ ಜ್ಯೂನಿಯರ್ ನ್ಯಾಷನಲ್ ಖೋ-ಖೋ ಚಾಂಪಿಯನ್‌ಷಿಪ್‌ಗೆ ನಗರದಲ್ಲಿರುವ ಕ್ರೀಡಾ ವಸತಿ ನಿಲಯದಮೂವರು ಕ್ರೀಡಾಪಟುಗಳು ಆಯ್ಕೆಯಾಗಿದ್ದಾರೆ. ಖೋ-ಖೋ ಪಂದ್ಯಾವಳಿಯು ಡಿ.26 ರಿಂದ 30ರ ವರೆಗೆ ನಡೆಯಲಿದ್ದು, ನಗರದ ಕ್ರೀಡಾ ವಸತಿ ನಿಲಯದ ಖೋ-ಖೋ ಕ್ರೀಡಾಪಟುಗಳಾದ ನಿಖಿಲ್, ಹುಲಗಪ್ಪ ಮತ್ತು ವೆಂಕಟೇಶ್ ಪಂದ್ಯಾವಳಿಯಲ್ಲಿ ಭಾಗವಹಿಸುವರು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕಿ ಕೆ.ಆರ್.ಜಯಲಕ್ಷ್ಮೀಬಾಯಿ ತಿಳಿಸಿದ್ದಾರೆ.

# ವಿದ್ಯಾರ್ಥಿ ವೇತನ ಬಿಡುಗಡೆಗೆ ಎಬಿವಿಪಿ ಆಗ್ರಹ

» ಚಿತ್ರದುರ್ಗ

2022-23 ನೇ ಸಾಲಿನ ಕಾರ್ಮಿಕರ ಕಲ್ಯಾಣ ನಿಧಿ ಯೋಜನೆಯ ಅಡಿಯಲ್ಲಿರುವ ವಿದ್ಯಾರ್ಥಿ ವೇತನ ಬಿಡುಗಡೆ ಹಾಗೂ ವಿದ್ಯಾರ್ಥಿ ವೇತನ ಕಡಿತಗೊಳಿಸಿರುವ ರಾಜ್ಯ ಸರ್ಕಾರದ ವಿರುದ್ಧ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ನಗರದಲ್ಲಿ ಪ್ರತಿಭಟನೆ ನಡೆಸಿ ಜಿಲ್ಲಾಡಳಿತದ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಿತು.




ರಾಜ್ಯದಲ್ಲಿ ಬಡ ಕಾರ್ಮಿಕರ ಮಕ್ಕಳು ಶಿಕ್ಷಣದಿಂದ ವಂಚಿತರಾಗಬಾರದು. ಅಪಾಯಕಾರಿ, ಅಸುರಕ್ಷಿತ,ಹಾಗೂ ಅಸಂಘಟಿತ ವಲಯದಲ್ಲಿ ಕಾರ್ಯ ನಿರ್ವಹಿಸುವ ಕಾರ್ಮಿಕರ ಮತ್ತು ಅವರ ಕುಟುಂಬದ ರಕ್ಷಣೆಗಾಗಿ ಸರಕಾರಗಳು ಬದ್ಧವಾಗಿರಬೇಕು, ಆದರೆ ರಾಜ್ಯ ಸರಕಾರ 2022-23 ನೇ ಸಾಲಿನ ಕಾರ್ಮಿಕರ ಕಲ್ಯಾಣ ನಿಧಿ ಯೋಜನೆಯ ಅಡಿಯಲ್ಲಿರುವ ವಿದ್ಯಾರ್ಥಿ ವೇತನ ಬಿಡುಗಡೆ ಕಾರ್ಯಕ್ರಮವನ್ನು ನವಂಬರ್ 09 ರಂದು ಮಾಡಿದೆ ಆದರೆ ಇಲ್ಲಿಯವರೆಗೆ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಜಮೆ ಆಗದೆ ಬಡ ವಿದ್ಯಾರ್ಥಿಗಳ ಜೀವನದ ಜೊತೆ ರಾಜ್ಯ ಸರ್ಕಾರ ಚೆಲ್ಲಾಟ ಆಡುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಎಲ್ಲ ಕಾರ್ಮಿಕರನ್ನು ನೋಂದಣಿ ಮಾಡಿಸಿಕೊಂಡಿದ್ದ ಹಿಂದಿನ ಸರ್ಕಾರ ಎಲ್ಲರಿಗೂ ಸಹಾಯ ಹಸ್ತವನ್ನುಚಾಚಿತ್ತು. ಜೊತೆಗೆ, ಎಲ್ಲ ಕಾರ್ಮಿಕರ ಮಕ್ಕಳಿಗೆ ವಿದ್ಯಾಭ್ಯಾಸಕ್ಕೆ ಅನುಕೂಲ ಆಗುವಂತೆ ಹಿಂದೆ ಇದ್ದ ವಿದ್ಯಾರ್ಥಿವೇತನಕ್ಕಿಂತ ಶೇ.50ರಷ್ಟು ಸಹಾಯಧನ ಹೆಚ್ಚಳ ಮಾಡಿತ್ತು. ಆದರೆ, ಇಂದಿನ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಕಾರ್ಮಿಕ ಇಲಾಖೆಯಲ್ಲಿ ಹಣವಿಲ್ಲವೆಂದು ನೆಪವೊಡ್ಡಿ ಕಾರ್ಮಿಕರ ಮಕ್ಕಳಿಗೆ ನೀಡಲಾಗುತ್ತಿದ್ದ ವಿದ್ಯಾರ್ಥಿವೇತನದ ಶೇ.60 ಮೊತ್ತವನ್ನು ಕಡಿತಗೊಳಿಸಿ ಆದೇಶ ಹೊರಡಿಸಿರುವ ಸರ್ಕಾರದ ಆದೇಶವನ್ನು ಖಂಡಿಸಿದರು.

2022-23 ನೇ ಸಾಲಿನ ಕಾರ್ಮಿಕರ ಕಲ್ಯಾಣ ನಿಧಿ ಯೋಜನೆಯ ಅಡಿಯಲ್ಲಿರುವ ವಿದ್ಯಾರ್ಥಿ ವೇತನ ತಕ್ಷಣ ಜಮೆ ಮಾಡಬೇಕು, ಯಾವುದೇ ರೀತಿ ಕಡಿತ ಮಾಡದೆ ಪೂರ್ಣ ವಿದ್ಯಾರ್ಥಿ ವೇತನವನ್ನು ನೀಡಬೇಕು. ವಿದ್ಯಾರ್ಥಿ ವೇತನಕ್ಕೆ ಸಲ್ಲಿಕೆ ಮಾಡಿದ್ದ 4 ಲಕ್ಷ ಮಕ್ಕಳಿಗೆ ವಿದ್ಯಾರ್ಥಿ ವೇತನ ನೀಡುವುದನ್ನು ರದ್ದುಗೊಳಿಸಿರುವ ಸರಕಾರ ಎಲ್ಲರಿಗೂ ವಿದ್ಯಾರ್ಥಿ ವೇತನ ನೀಡಬೇಕು ಎಂದು ಆಗ್ರಹಿಸಿತು.

ರಾಜ್ಯ ಕಾರ್ಯಕರಣಿ ಸದಸ್ಯರಾದ ಸುದರ್ಶನ್‌ನಾಯ್ಕ್, ಕನಕರಾಜ್ ಕೋಡಿಹಳ್ಳಿ, ಜಿಲ್ಲಾ ಸಂಚಾಲಕರು ಸಿದ್ದೇಶ್, ನಗರ ಕಾರ್ಯದರ್ಶಿ ಗೋಪಿ, ಸಾಮಾಜಿಕ ಜಾಲತಾಣ ಚಿತ್ರಸ್ವಾಮಿ, ಮಹಿಳಾ ಪ್ರಮುಖ ಚೈತ್ರಾ, ಕಾರ್ಯಕರ್ತರು ದರ್ಶನ್, ಸುದೀಪ್, ಮಧು, ಅಜಯ್ ಪಾಲ್ಗೊಂಡಿದ್ದರು.

# ತಂಬಾಕು ಮುಕ್ತ ಸಮಾಜಕ್ಕೆ ಜಾಗೃತಿ ಅತ್ಯಗತ್ಯ

» ದಾವಣಗೆರೆ

ಇತ್ತೀಚಿನ ದಿನಗಳಲ್ಲಿ ಯುವಕರು ಗುಟ್ಕಾ, ತಂಬಾಕು ಹಾಗೂ ಮಾದಕ ವಸ್ತುಗಳಿಗೆ ಹೆಚ್ಚು ಬಲಿಯಾಗುತ್ತಿದ್ದು, ಇದರ ದುಷ್ಪರಿಣಾಮಗಳ ಬಗ್ಗೆ ಪರಿಣಾಮಕಾರಿಯಾಗಿ ಜಾಗೃತಿ ಮೂಡಿಸುವುದರ ಮೂಲಕ ತಂಬಾಕು ಮುಕ್ತ ಸಮಾಜಕ್ಕೆ ಎಲ್ಲರೂ ಕೈಜೋಡಿಸಬೇಕಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಪಿ.ಎನ್ ಲೋಕೇಶ್ ತಿಳಿಸಿದರು.ಶುಕ್ರವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.ಕರ್ನಾಟಕದಲ್ಲಿ ಪ್ರತಿದಿನಕ್ಕೆ 293 ಮಕ್ಕಳುತಂಬಾಕುಸೇವನೆಗೆಆಕರ್ಷಿತರಾಗುತ್ತಿದ್ದು, ಶಾಲಾ ಕಾಲೇಜುಗಳಲ್ಲಿ ತಂಬಾಕು ನಿಯಂತ್ರಣ ಕುರಿತಂತೆ ಹೆಚ್ಚಿನದಾಗಿ ಜಾಗೃತಿ ಮೂಡಿಸಬೇಕು. ಹಾಗೂ ಎಲ್ಲಾ ಶಿಕ್ಷಣ ಸಂಸ್ಥೆ ಮತ್ತು ಸರ್ಕಾರಿ ಕಚೇರಿಗಳಲ್ಲಿ ಕಡ್ಡಾಯವಾಗಿ ತಂಬಾಕು ಮುಕ್ತ ವಲಯ ನಾಮಫಲಕಗಳನ್ನು ಅಳವಡಿಸಬೇಕು. ಜಿಲ್ಲೆಯಲ್ಲಿರುವ ಎಲ್ಲಾ ಶೈಕ್ಷಣಿಕ ಸಂಸ್ಥೆಗಳನ್ನು ತಂಬಾಕು ಮುಕ್ತ ಶೈಕ್ಷಣಿಕ ಸಂಸ್ಥೆಗಳನ್ನಾಗಿ ಮಾಡುವ ನಿಟ್ಟಿನಲ್ಲಿ ಶಾಲಾ ಕಾಲೇಜುಗಳಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ನಡೆಸಬೇಕು ಎಂದರು.



ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ 5 ಸಾವಿರ ಅಂಗಡಿಗಳಿದ್ದು, ಅದರಲ್ಲಿ ಕೇವಲ 1500 ಮಾತ್ರ ಲೈಸೆನ್ಸ್ ಪಡೆದು ತಂಬಾಕು ಮಾರಾಟ ಮಾಡುತ್ತಿದ್ದು, ಬಾಕಿ ಉಳಿದ ಅಂಗಡಿ ಮಾಲೀಕರಿಗೂ ಪರವಾನಗಿ ನೀಡಲು ಕ್ರಮವಹಿಸಬೇಕು ಲೈಸೆನ್ಸ್ ಪಡೆಯದೆ ತಂಬಾಕು ಮಾರಾಟ ಮಾಡುವವರ ಮೇಲೆ ಕ್ರಮ ಕೈಗೊಳ್ಳಬೇಕು ಎಂದರು.

ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಹಿರಿಯ ಸಿವಿಲ್ ನ್ಯಾಯಾಧೀಶ ಮಹಾವೀರ್ ಮ. ಕರೆಣ್ಣವರ ಮಾತನಾಡಿ ತಾಲ್ಲೂಕು ಮಟ್ಟದ ಆರೋಗ್ಯಾಧಿಕಾರಿಗಳು ಜಿಲ್ಲಾ ಮಟ್ಟದ ಅಧಿಕಾರಿಗಳನ್ನು ಕಾಯದೇ ತಾವೇ ಜವಾಬ್ದಾರಿ ವಹಿಸಿಕೊಂಡು ತಂಬಾಕು ನಿಯಂತ್ರಣ ತನಿಖಾ ದಳದ ಸದಸ್ಯರೊಂದಿಗೆ ತಾಲ್ಲೂಕು ಮಟ್ಟದಲ್ಲಿ ಕಡ್ಡಾಯವಾಗಿ ತಿಂಗಳಿಗೆ ಒಂದು ತಂಬಾಕು ದಾಳಿಯನ್ನು ಕೈಗೊಳ್ಳಬೇಕು ಹಾಗೂ ತ್ರೈಮಾಸಿಕ ಸಭೆಯನ್ನು ಏರ್ಪಡಿಸಬೇಕು ಎಂದರು..

ಎನ್.ಎಸ್.ಎಸ್ ಕ್ಯಾಂಪ್‌ಗಳಲ್ಲಿ ತಂಬಾಕು ನಿಯಂತ್ರಣ ಕುರಿತಂತೆ ಸಾರ್ವಜನಿಕರಿಗೆ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಗೋಡೆ ಬರಹಗಳನ್ನು ಬರೆಸಬೇಕು. ದಾವಣಗೆರೆ ವಿಶ್ವವಿದ್ಯಾನಿಲಯ ಸುತ್ತಮುತ್ತ ಅಕ್ರಮವಾಗಿ ಮದ್ಯ ಹಾಗೂ ತಂಬಾಕು ಮಾರಾಟವಾಗುತ್ತಿರುವುದು ಕೇಳಿಬರುತ್ತಿದ್ದು ಪೋಲೀಸ್ ಅಧಿಕಾರಿಗಳು ಕೂಡಲೆ ಈ ಕುರಿತು ಪರಿಶೀಲನೆ ನಡೆಸಬೇಕು ಎಂದರು.

ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿಜಯಕುಮಾರ್ ಎಂ. ಸಂತೋಷ್, ಜಿಲ್ಲಾ ಅರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಷಣ್ಮುಖಪ್ಪ, ಜಿಲ್ಲಾ ಶಸ್ತ್ರ ಚಿಕಿತ್ಸಾಧಿಕಾರಿ ನಾಗೇಂದ್ರಪ್ಪ, ಪರಿಸರ ಅಧಿಕಾರಿ ಲಕ್ಷ್ಮೀಕಾಂತ್, ಎನ್.ಟಿ.ಸಿ.ಪಿ ಕಾರ್ಯಾಲಯ ಅಧಿಕಾರಿ ಡಾ. ಜಿ.ಡಿ. ರಾಘವನ್, ಚನ್ನಗಿರಿ ತಾಲ್ಲೂಕು ಆರೋಗ್ಯಾಧಿಕಾರಿ ಡಾ. ಶಿವಕುಮಾರ್, ಆರ್.ಟಿ.ಒ ಕಚೇರಿ ಅಧೀಕ್ಷಕ ಶಶಿಧರ.ಪಿ ಉಪಸ್ಥಿತರಿದ್ದರು.

# ಮುಂದಿನ ಚುನಾವಣೆಗೆ ನಾನು ಆಕಾಂಕ್ಷಿಯಲ್ಲ

» ಮೊದಲ ಪುಟದಿಂದ

ಅವರು ಮುಂದಿನ ಚುನಾವಣೆಯಲ್ಲಿ ಸ್ಪರ್ಧೆ ಮಾಡುವುದನ್ನುನಿರ್ಧರಿಸುವುದು ನನ್ನ ಪಕ್ಷ. ನಾನು ಪಕ್ಷದ ಸೇನಾನಿ. ಪಕ್ಷ ಏನು ಹೇಳುತ್ತದೆಯೋ ಅದನ್ನು ಮಾಡುವವನು. ನಾನು ಯಾವುದೇ ನಿರೀಕ್ಷೆ ಹೊಂದಿದವನಲ್ಲ ಎಂದು ಹೇಳಿದರು.

ದೇಶ ಸಮೃದ್ಧವಾಗಿರಬೇಕು ಎನ್ನುವುದು ಒಂದೇ ನನ್ನ ಕನಸು. ನಾನೇಟಿಕೆಟ್‌ತೆಗೆದುಕೊಳ್ಳಬೇಕು, ನಾನೇ ಎಂಪಿ ಆಗಬೇಕು, ನನ್ನ ಮಕ್ಕಳೇ ಆಗಬೇಕು ಎನ್ನುವುದು ನಾರಾಯಣಸ್ವಾಮಿ ಅಲ್ಲ, ಆ ಹುಚ್ಚುತನಕ್ಕೆ ಅಂಟಿಕೊಂಡಿಲ್ಲ. ಆ ಹುಚ್ಚುತನಕ್ಕೆ ಈ ಜಿಲ್ಲೆಗೆ ಬರಲಿಲ್ಲ. ನನ್ನ ಪಕ್ಷ ಇಲ್ಲಿ ಸ್ಪರ್ಧೆ ಮಾಡಬೇಕು ಎಂದು ಹೇಳಿತ್ತು. ಮಾಡಿದ್ದೆ. ಇಲ್ಲಿನ ಜನ ಪ್ರೀತಿಯಿಂದ ಮತ ಕೊಟ್ಟು ಗೆಲ್ಲಿಸಿದ್ದಾರೆ. ಪಕ್ಷ ಕೂಡಾ ಅಷ್ಟೇ ಪ್ರೀತಿಯಿಂದ ಮಂತ್ರಿ ಮಾಡಿದೆ ಎಂದರು.

ಅಷ್ಟು ದೂರದಿಂದ ಬಂದು ಇಲ್ಲಿ ಜನರ ನಿರೀಕ್ಷೆಗೆ ತಕ್ಕಂತೆ ಕೆಲಸ ಮಾಡಲು ಆಗಲಿಲ್ಲ ಎನ್ನುವ ಕೊರಗಿದೆ. ಒಬ್ಬ ಚುನಾಯಿತ ಸದಸ್ಯ ಮತದಾರರಿಗೆ ಸಿಗಬೇಕು. ಆದರೆ, ಬೀದಿ ಬೀದಿಗೆ ಹೋಗಿ ಸುಳ್ಳು ಹೇಳಿಕೊಂಡು ಬರಲು ಆಗುವುದಿಲ್ಲ ಎಂದು ತಿಳಿಸಿದರು.

ಸ್ಥಳೀಯರಿಗೆ ಟಿಕೇಟ್ ಕೊಟ್ಟರೆ ನಾನೂ ಹೂವಿನ ಹಾರ ಹಾಕುತ್ತೇನೆ. ನಮ್ಮ ಪಕ್ಷ ಸರ್ವೆ ಮಾಡುತ್ತದೆ. ಆ ಸಮೀಕ್ಷೆಯಲ್ಲಿ ಸ್ಥಳೀಯರೇ ಗೆಲ್ಲುತ್ತಾರೆ ಎನ್ನುವ ವರದಿ ಬಂದರೆ ಖಂಡಿತ ಕಾರ್ಯಕರ್ತರಿಗೆ ಟಿಕೇಟ್ ಕೊಡುತ್ತದೆ. ಆಗ ನಾನು ಕೂಡಾ ಒಬ್ಬಸದಸ್ಯನಾಗಿಪ್ರಾಮಾಣಿಕವಾಗಿ ಕೆಲಸ ಮಾಡುತ್ತೇನೆ. ಇದೇ ನಮ್ಮ ಪಕ್ಷದ ಸಿದ್ಧಾಂತ ಎಂದು ಹೊರಗಿನವರು-ಸ್ಥಳೀಯರು ಎನ್ನುವ ವಿಷಯ ಕುರಿತ ಪ್ರಶ್ನೆಗೆ ಪ್ರತಿಕ್ರಿಯಿಸಿದರು.

ಸಂಸದರ ಅಮಾನತು, ಪ್ರಜಾಪ್ರಭುತ್ವದ ಕಗ್ಗೊಲೆ ಎಂಬ ಸಿಎಂ ಹೇಳಿಕೆ ವಿಚಾರವಾಗಿ ಕೇಂದ್ರ ಸಚಿವ ಎ ನಾರಾಯಣಸ್ವಾಮಿ ಪ್ರತಿಕ್ರಿಯೆ ನೀಡಿ ಆಯಾ ಸದನಗಳಲ್ಲಿ ತನ್ನದೇ ಸಂಪ್ರದಾಯಗಳು ಇರ್ತವೆ. ಆ ಸಂಪ್ರದಾಯಗಳನ್ನು ಯಾರು ಮುರಿಯಬಾರದು, ಆಯಾ ಸದನಗಳಲ್ಲಿ ಸ್ಪೀಕರ್ ಪ್ರಮುಖರಾಗಿರ್ತಾರೆಆಯಾ ಸದನಗಳಲ್ಲಿ ಪ್ರಾವಿತ್ಯ ಇರುತ್ತದೆ ಎಂದು ಕೇಂದ್ರ ಸಚಿವ ನಾರಾಯಣಸ್ವಾಮಿ ಅವರು ಹೇಳಿಕೆ ನೀಡುವ ಮೂಲಕ ಸಂಸದರ ಅಮಾನುತು ಸಮರ್ಥಿಸಿಕೊಂಡಿದ್ದಾರೆ.

ಮುಖ್ಯಮಂತ್ರಿ ಸ್ಥಾನದಲ್ಲಿರುವ ಸಿದ್ದರಾಮಯ್ಯ ವ್ಯಾಖ್ಯಾನ ಮಾಡುತ್ತಾರೆ. ಯಾವ ಪಕ್ಷ, ಎಷ್ಟು ಶಾಸಕರು, ಸಂಸದರು ಗೆದ್ದಿದ್ದಾರೆ ಎನ್ನುವ ಆಧಾರದಲ್ಲಿ ಸದನಗಳಲ್ಲಿ ಮಾತನಾಡು ಅವಕಾಶ, ಸಮಯ ಸಿಗಲಿದೆ. ಶಾಸಕರು, ಸಿಎಂ ಯಾವಾಗ ಮಾತನಾಡಬೇಕೆಂದು ಸಮಯ ಇರುತ್ತದೆ, ಸಂಸತ್ತಿನಲ್ಲಿಯೂ ಪ್ರಮುಖರಾಗಿ ಸ್ಪೀಕರ್ ಇರ್ತಾರೆ, ಸ್ಪೀಕರ್ ವ್ಯಾಪ್ತಿಯಲ್ಲಿ ಘಟನೆಯಾದಾಗ ಅವರೇ ಉತ್ತರಿಸಬೇಕಾಗುತ್ತೆ. ಕೆಲವು ಸಂಪ್ರದಾಯಗಳಂತೆ ಕಾನೂನು ಪರಿಪಾಲನೆ ವೇಳೆ ಸ್ಪೀಕರ್ ಉತ್ತರಿಸಬೇಕಾಗುತ್ತೆ. ಸ್ಪೀಕರ್ ಗೆ ಪರಮಾಧಿಕಾರ ಇರುತ್ತದೆ.60 ವರ್ಷದ ಆಳ್ವಿಕೆ ನಡೆಸಿದ ಕಾಂಗ್ರೆಸ್ ಶಿಷ್ಟಾಚಾರ ಪಾಲನೆ ಮಾಡಿದ್ದರೆ ಸಂಸದರ ಅಮಾನತು ಆಗುತ್ತಿರಲಿಲ್ಲ ಎಂದು ಕೇಂದ್ರ ಸಚಿವರು ಹೇಳಿದರು.ಸ್ಪೀಕರ್ ಧಿಕ್ಕರಿಸಿ ಪ್ರಧಾನಮಂತ್ರಿಗಳು ಸೇರಿದಂತೆ ಯಾವುದೇ ಇಲಾಖೆಯ ಸಚಿವರಿಗೆ ಉತ್ತರಿಸುವ ಹಕ್ಕು ಇರುವುದಿಲ್ಲ. ಒಂದು ವೇಳೆ ಉತ್ತರಿಸಿದರೆ ಶಿಷ್ಟಾಚಾರ ಉಲ್ಲಂಘನೆ ಆಗಲಿದೆ.

# ಕನ್ನಡ ನಾಮ ಫಲಕಗಳನ್ನು ಅಳವಡಿಸುವಂತೆ ಮನವಿ

» ಚಿತ್ರದುರ್ಗ

ನಗರದ ಎಲ್ಲಾ ಅಂಗಡಿ ಮುಂಗಟ್ಟುಗಳು ಹಾಗೂ ಸಾರ್ವಜನಿಕ ಸ್ಥಳಗಳಲ್ಲಿರುವ ಇಂಗ್ಲಿಷ್ ನಾಮ ಫಲಕಗಳನ್ನು ಕೂಡಲೆ ತೆರವುಗೊಳಿಸಿ ಕನ್ನಡ ನಾಮ ಫಲಕಗಳನ್ನು ಅಳವಡಿಸುವಂತೆ ಸರ್ಕಾರ ಆದೇಶಿಸಿರುವುದನ್ನು ಪಾಲಿಸಬೇಕೆಂದು ಕರುನಾಡ ವಿಜಯಸೇನೆ ಕಾರ್ಯಕರ್ತರು ಶುಕ್ರವಾರ ನಗರಸಭೆ ಪೌರಾಯುಕ್ತರಿಗೆ ಮನವಿ ಸಲ್ಲಿಸಿದರು.

ಕರ್ನಾಟಕದಲ್ಲಿ ಕನ್ನಡವನ್ನು ಶೇ.65 ರಷ್ಟು ಬಳಸುವಂತೆ ಸರ್ಕಾರ ಆದೇಶಿಸಿದೆ. ಆದರೂ ಇಂಗ್ಲಿಷ್ ನಾಮ ಫಲಕಗಳನ್ನು ಹಾಕಿಕೊಂಡಿರುವವರ ವಿರುದ್ದ ಇದುವರೆವಿಗೂ ಯಾವುದೆ ಕ್ರಮ ಕೈಗೊಂಡಿಲ್ಲ. ಇದು ಕರ್ನಾಟಕಕ್ಕೆ ಕನ್ನಡಿಗರಿಗೆ ಆಗಿರುವ ಅವಮಾನ ಎಂದು ಕಿಡಿಕಾರಿದ ಕರುನಾಡ ವಿಜಯಸೇನೆ ಜಿಲ್ಲಾಧ್ಯಕ್ಷ ಕೆ.ಟಿ.ಶಿವಕುಮಾರ್ ಕನ್ನಡ ನಾಮಫಲಕಗಳನ್ನು



ಅಳವಡಿಸುವಂತೆ ಬೆಂಗಳೂರು ಸೇರಿ ವಿವಿಧ ಜಿಲ್ಲೆಗಳಲ್ಲಿ ಹೋರಾಟ ನಡೆಸಿದ ಕನ್ನಡಿಗರ ಮೇಲೆ ಹಾಕಿರುವ ಕೇಸನ್ನು ಹಿಂದಕ್ಕೆ ಪಡೆಯಬೇಕು. ಈ ಸಂಬಂಧ ಜ.5 ರವರೆಗೆ ಗಡುವು ನೀಡಲಾಗಿದೆ ಎಂದು ಸರ್ಕಾರಕ್ಕೆ ಎಚ್ಚರಿಸಿದರು.

ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ವೀಣಗೌರಣ್ಣ, ಪ್ರಧಾನ ಕಾರ್ಯದರ್ಶಿ ಗೋಪಿನಾಥ್, ಕಾರ್ಯದರ್ಶಿ ಜಗದೀಶ್ ಸಿ, ಉಪಾಧ್ಯಕ್ಷೆ ರತ್ನಮ್ಮ, ಕಮಲ, ಯುವ ಘಟಕದ ಅಧ್ಯಕ್ಷ ನಾಗರಾಜ್ ಮುತ್ತು, ನಗರಾಧ್ಯಕ್ಷ ಅವಿನಾಶ್, ಮಹಮದ್ ರಫಿ, ಶಾನ್, ಸುರೇಶ್, ರಾಜಣ್ಣ, ಅಖಿಲೇಶ್, ಹರೀಶ್ ಈ ಸಂದರ್ಭದಲ್ಲಿ ಹಾಜರಿದ್ದರು.

## ಪ್ರಮುಖ ಸುದ್ದಿ

# ಬದುಕು ರೂಪಿಸಿಕೊಳ್ಳಲು ಪದವಿ ಶಿಕ್ಷಣದಿಂದ ಮಾತ್ರ ಸಾಧ್ಯ

» ಚಳ್ಳಕೆರೆ

ತಮ್ಮ ಭವಿಷ್ಯದ ಬದುಕಿಗಾಗಿ ವಿದ್ಯಾರ್ಥಿಗಳು ಕಾಲೇಜಿಗೆ ಸೇರಿ ಪದವಿಮುಗಿಸಿ ತಮ್ಮ ಜೀವನವನ್ನು ಕಟ್ಟಿಕೊಳ್ಳಲು ಪ್ರಾಮಾಣಿಕ ಪ್ರಯತ್ನ ಮಾಡುತ್ತಾರೆ. ಆದರೆ, ವಿದ್ಯಾರ್ಥಿಗಳು ಕಲಿಯುವಸಂದರ್ಭದಲ್ಲಿನಿರ್ಲಕ್ಷ್ಯವಹಿಸಿ ಅನಗತ್ಯ ವಿಚಾರಗಳತ್ತ ದೃಷ್ಠಿಹಾಯಿಸಿದರೆ ವಿದ್ಯಾರ್ಥಿಗಳ ಬದುಕಿನಲ್ಲಿ ಕತ್ತಲು ಆವರಿಸಿದುವುದು ಖಚಿತ. ಆದ್ದರಿಂದ ಕಲಿಕಾವಿಚಾರದಲ್ಲಿ ವಿದ್ಯಾರ್ಥಿಗಳು ನಿರ್ಲಕ್ಷ್ಯ ಸಲ್ಲದು ಎಂದು ಎಚ್‌ಪಿಪಿಸಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಇತಿಹಾಸ ಪ್ರಾಧ್ಯಾಪಕ ರಾಜಕುಮಾರ್ ತಿಳಿಸಿದರು.

ನಗರದ ಬಾಪೂಜಿ ಪದವಿ ಕಾಲೇಜಿನಲ್ಲಿ ಪದವಿ ವಿದ್ಯಾರ್ಥಿಗಳಿಗೆ ಹಮ್ಮಿಕೊಂಡಿದ್ದ ಶೈಕ್ಷಣಿಕ ಕಾರ್ಯಗಾರ ಮತ್ತು ಸ್ವಾಗತಕಾರ್ಯಕ್ರಮವನ್ನು ಜ್ಯೋತಿ ಬೆಳಗುವ ಮೂಲಕ ಉದ್ಘಾಟಿಸಿ ಮಾತನಾಡಿದರು. ಇತ್ತೀಚಿನ ದಿನಗಳಲ್ಲಿ ಕಾಲೇಜಿನ ಪದವಿ ಫಲಿತಾಂಶಗಳು



ನೋಡಿದಾಗ ಕಲಿಕೆಯಲ್ಲಿ ವಿದ್ಯಾರ್ಥಿಗಳ ನಿರಾಶಕ್ತಿ ಹೆಚ್ಚಿದೆ ಎಂಬ ಅಂಶ ಗೋಚರವಾಗಿದೆ. ಆದ್ದರಿಂದ ವಿದ್ಯಾರ್ಥಿಗಳು ತಮ್ಮ ಜವಾಬ್ದಾರಿಯನ್ನು ಅರಿತು ಸಕ್ರಿಯವಾಗಿ ಕಲಿಕೆಯಲ್ಲಿ ಭಾಗವಹಿಸಬೇಕು. ನೀವು ಕಲಿಯುವ ವಿದ್ಯೆ ನಿಮ್ಮ ಮುಂದಿನ ಭವಿಷ್ಯದಲ್ಲಿ ಬೆಳಕನ್ನು ನೀಡಲಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಕಾಲೇಜು ಪ್ರಾಂಶುಪಾಲ ಓ.ಬಾಬುಕುಮಾರ್ ಮಾತನಾಡಿ, ಶೈಷಣಿಕ ಕಾರ್ಯಗಾರದ ಮೂಲಕ ವಿದ್ಯಾರ್ಥಿಗಳ ಕಲಿಕೆಗೆ ಚುರುಕು ಮುಟ್ಟಿಸುವುದಲ್ಲದೆ, ಅವರಲ್ಲಿರುವ ಜವಾಬ್ದಾರಿಯನ್ನು ಸಹ ಗುರುತಿಸುವ ಕೆಲಸ ನಡೆಯುತ್ತಿದೆ. ಪ್ರತಿವರ್ಷವೂ ಕಾಲೇಜಿನ ವಿದ್ಯಾರ್ಥಿಗಳಿಗಾಗಿ ಇಂತಹ ಹಲವಾರು ಶೈಕ್ಷಣಿಕ ಕಾರ್ಯಗಾರದ ಮೂಲಕ ಅವರನ್ನು ಜಾಗೃತಗೊಳಿಸಲಾಗುತ್ತಿದೆ. ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿಯೊಬ್ಬ ವಿದ್ಯಾರ್ಥಿಯೂ ತನ್ನ ಬದುಕನ್ನು ರೂಪಿಸಿಕೊಂಡರೆ ಮಾತ್ರ ಕಾಲೇಜಿನಲ್ಲಿ ವ್ಯಾಸಂಗ ಮಾಡಿದ್ದಕ್ಕೆ ಸಾರ್ಥಕತೆ ಉಂಟಾಗುತ್ತದೆ. ಪ್ರತಿಯೊಬ್ಬರೂ ಈ ವಿಚಾರದಲ್ಲಿ ಹೆಚ್ಚು ಜಾಗೃತನಾಗಿರಬೇಕು ಎಂದರು.

ಪ್ರಾಧ್ಯಾಪಕರಾದ ಡಾ.ಜಿ.ವಿ.ರಾಜಣ್ಣ, ಡಾ.ಕರಿಯಣ್ಣ, ಡಾ.ತಿಪ್ಪೇಸ್ವಾಮಿ, ಉಮೇಶ್, ನಂದಿನಿ, ಮುಜಿಬುಲ್ಲಾ, ಕಚೇರಿ ಅಧೀಕ್ಷಕರಾದ ಭಾಗ್ಯಲಕ್ಷ್ಮಿ ಮುಂತಾದವರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಡಿ.25ರಂದು ಬೆಳದಿಂಗಳ ಸವಿ ಭೋಜನ

» **ಹೊಸದುರ್ಗ**

ತಾಲ್ಲೂಕಿನ ಕೇಶವಪುರ (ಮಳಲಿ) ಗ್ರಾಮದಲ್ಲಿ ವಿಸ್ಮಯ ಗೋಮಂದಿರ ವತಿಯಿಂದ ಇದೇ ಡಿಸೆಂಬರ್ 25ರಂದು ಸಂಜೆ 6ಕ್ಕೆ ಮೂರನೇ ತಿಂಗಳ ಬೆಳದಿಂಗಳ ಸವಿ ಭೋಜನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಈ ಕಾರ್ಯಕ್ರಮದ ರೂವಾರಿಗಳಾದ ಯೋಗ ವಿಸ್ಮಯ ಟ್ರಸ್ಟ್ (ರಿ.)ನ ಸಂಸ್ಥಾಪಕರಾದ ಅನಂತ್ ಜೀ ಯೋಗ ಗುರುಗಳ "ನನ್ನ ಕನಸು ನನ್ನ ಹೊಸದುರ್ಗ" ಎಂಬ ಪಂಚವಾರ್ಷಿಕ ಯೋಜನೆಯಡಿಯಲ್ಲಿ ಮಳಲಿ ಗ್ರಾಮವನ್ನು ಆಯ್ಕೆ ಮಾಡಿಕೊಂಡು ಸಾವಯವ ಕೃಷಿಯನ್ನು ಉತ್ತೇಜಿಸಲು ಹಾಗೂ ಇದಕ್ಕೆ ಬಹು ಮುಖ್ಯವಾಗಿ ಬೇಕಾದ ಗೋವುಗಳಿಗಾಗಿ ವಿಸ್ಮಯ ಗೋ ಮಂದಿರವನ್ನು ಪ್ರಾರಂಭಿಸುತ್ತಿದ್ದಾರೆ. ಇದಕ್ಕೆ ಪೂರಕವಾಗಿ ಈಗಾಗಲೇ ಮೊದಲ ಮತ್ತು ಎರಡನೇ ಬೆಳದಿಂಗಳ ಸವಿ ಭೋಜನ ಕಾರ್ಯಕ್ರಮವನ್ನು ವಿಸ್ಮಯ ಗೋ ಮಂದಿರ ಟ್ರಸ್ಟ್, ಛತ್ರಪತಿ ಶಿವಾಜಿ ಮಕ್ಕಳ ಸೈನ್ಯದ ಸದಸ್ಯರ ಹಾಗೂ ಗ್ರಾಮಸ್ಥರ ಸಹಕಾರದೊಂದಿಗೆ ಯಶಸ್ವಿಯಾಗಿ ನೆರವೇರಿಸಿದ್ದಾರೆ. ಹೊಸದುರ್ಗ ಭಗೀರಥ ಪೀಠದ ಡಾ. ಪುರುಷೋತ್ತಮಾನಂದ ಮಹಾಸ್ವಾಮೀಜಿಗಳು ದಿವ್ಯ ಸಾನಿಧ್ಯ ವಹಿಸಲಿದ್ದು, ಅಂದು ಸಂಜೆ 6 ಗಂಟೆಗೆ ಸರಿಯಾಗಿ ಕಾರ್ಯಕ್ರಮ ಪ್ರಾರಂಭವಾಗಲಿದೆ. ಚಿತ್ರದುರ್ಗದ ಕುಲಕರ್ಣಿಯವರಿಗೆ ಮತ್ತು ತಾಲ್ಲೂಕಿನ ಶ್ರೀ ಗುರು ಅವರಿಗೆ "ವಿಶೇಷ ಗೋ ಪಾಲಕ" ಬಿರುದು ಕೊಟ್ಟು ಗೌರವಿಸಲಾಗುವುದು. ಜೊತೆಗೆ ಕೇಶವಪುರ ಈಗಿನ ಮಳಲಿಯ ನಿಜ ಇತಿಹಾಸ ಅನಾವರಣ ಜರುಗಲಿದೆ.ವಿಶೇಷವಾಗಿ ಈ ಬಾರಿ ಕಾರ್ಯಕ್ರಮದಲ್ಲಿ ಭಾರತೀಯ ಸೇನೆಯ ಉಪ ಮುಖ್ಯಸ್ಥರಾಗಿ ಕಾರ್ಯ ನಿರ್ವಹಿಸಿರುವ ನಮ್ಮ ಹೆಮ್ಮೆಯ ಕನ್ನಡಿಗ, ವಿಶಿಷ್ಟ ಸೇವಾ ಪದಕ, ಉತ್ತಮ ಯುದ್ಧ ಸೇವಾ ಪದಕ, ಅತೀ ವಿಶಿಷ್ಟ ಸೇವಾ ಪದಕ, ಯುದ್ಧ ಸೇವಾ ಪದಕ ಹಾಗೂ ರಾಷ್ಟ್ರಪತಿಗಳಿಂದ ಉತ್ತಮ ಹಾಗೂ ಅತ್ಯುತ್ತಮ ಸೇವಾ ಪದಕ ಇನ್ನೂ ಹತ್ತು ಹಲವು ಪದಕಗಳನ್ನು ಪಡೆದಿರುವ ಬಿ. ಎಸ್. ರಾಜೂರವರಿಗೆ ವಿಶೇಷ ಸನ್ಮಾನ ಕಾರ್ಯಕ್ರಮ.ಮುಖ್ಯ ಅಥಿತಿಗಳಾಗಿ ತಾಲ್ಲೂಕಿನ ಜನಪ್ರಿಯ ಶಾಸಕರಾದ ಬಿ ಜಿ ಗೋವಿಂದಪ್ಪ, ಜಿಲ್ಲಾ ವಾರ್ತಾಧಿಕಾರಿ ತುಕಾರಾಂರಾವ್, ಆಗ್ರೋ ಶಿವಣ್ಣ, ಕಾರಳ್ಳಿ ಬಸಣ್ಣ, ಅನಂತ್, ಚಂದ್ರಶೇಖರ್, ಗೋ ತಿಪ್ಪೇಸ್ವಾಮಿ, ಕೃಷಿ ನಿರ್ದೇಶಕರಾದ ಈಶ, ಕಂಗುವಳ್ಳಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಾದ ಗೋವಿಂದಸ್ವಾಮಿ, ಪಂಚಾಯಿತಿ ಅಧ್ಯಕ್ಷರು, ಸದಸ್ಯರು, ಭಾಗವಹಿಸಲಿದ್ದಾರೆ. ಕಾರ್ಯಕ್ರಮದ ನಂತರ ಕೊನೆಯಲ್ಲಿ ಚಂದ್ರನ ಹಾಲಿನಂತಹ ಬೆಳದಿಂಗಳ ಬೆಳಕಿನಲ್ಲಿ ಪ್ರೀತಿಯ ಸವಿ ಭೋಜನದ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ ಎಂದು ಕಾರ್ಯದರ್ಶಿಗಳಾದ ತೀರ್ಥಪ್ಪ ತಿಳಿಸಿದ್ದಾರೆ.

### ಇಂದು ಹರಿಹರ ಸುಗಮ ಸಂಗೀತ ಪರಿಷತ್ತಿನ ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭ

» **ಹರಿಹರ**

ಡಿಸೆಂಬರ್ 23ರಂದು ಶನಿವಾರ ಮಧ್ಯಾಹ್ನ ಮೂರು ಗಂಟೆಗೆ ಹರಿಹರದ ಶಿವಮೊಗ್ಗ ರಸ್ತೆಯಲ್ಲಿರುವ ಗಿರಿಯಮ್ಮ ಪದವಿ ಪೂರ್ವ ಕಾಲೇಜಿನ ಮುಖ್ಯ ಸಭಾಂಗಣದಲ್ಲಿ ನಡೆಯಲಿದೆ ಎಂದು ಹರಿಹರ ತಾ. ಹರಿಹರ ಸುಗಮ ಸಂಗೀತ ಪರಿಷತ್ತಿನ ಪ್ರಧಾನ ಕಾರ್ಯದರ್ಶಿ ಡಾ. ಕೆ. ಜೈಮುನಿ ತಿಳಿಸಿದ್ದಾರೆ. ಸಮಾರಂಭದ ಅಧ್ಯಕ್ಷತೆಯನ್ನು ಕಲಾವಿದರಾದ ಜಿ. ಪರಮೇಶ್ವರಪ್ಪ ಕತ್ತಿಗೆ ಅಧ್ಯಕ್ಷರು ಹರಿಹರ ತಾ.ಹರಿಹರ ಸುಗಮ ಸಂಗೀತ ಪರಿಷತ್ ಇವರು ವಹಿಸಿಕೊಳ್ಳಲಿದ್ದು, ಉದ್ಘಾಟನೆಯನ್ನು ಶ್ರೀಯುತ ಸಾಲಿಗ್ರಾಮ ಗಣೇಶ್ ಶಣೈ ಅಧ್ಯಕ್ಷರು ಜಿಲ್ಲಾ ಸುಗಮ ಸಂಗೀತ ಪರಿಷತ್ ಇವರು ನೆರವೇರಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಶ್ರೀಮತಿ ಗಿರಿಯಮ್ಮ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯರಾದ ಜಿ ಬಿ ಗಂಗಾಧರ್ ಹರಿಹರದ ಮಹಿಳಾ ಸಮಾಜದ ಅಧ್ಯಕ್ಷರಾದ ಶ್ರೀಮತಿ ಕೆ.ಎ. ಉಮಾ ಹರಿಹರದ ಖ್ಯಾತ ಕಲಾವಿದರಾದ ರಾಜಕುಮಾರ್ ಸಂಘದ ಅಧ್ಯಕ್ಷರಾದ ಸುಭಾಷ್ ಬೊಂಗಾಳೆ, ಹರಿಹರ ಸು.ಸಂ.ಪ.ನ. ಗೌರವ ಸಲಹೆಗಾರರು ಹರಿಹರ ನಗರಸಭೆಯ ಮಾಜಿ ಅಧ್ಯಕ್ಷರಾದ ಬಿ. ರೇವಣಸಿದ್ದಪ್ಪ, ಹರಿಹರ ಸು.ಸಂ.ಪ.ನ. ಖಜಾಂಚಿ ಡಿ. ಕುಮಾರ್, ಭಾಗವಹಿಸಲಿದ್ದಾರೆ ಎಂದು ಸಂಘಟನಾ ಕಾರ್ಯದರ್ಶಿ ಹರಿಹರ ಸೂ.ಸಂ.ಪರಿಷತ್ತು ಕೊಟ್ರೇಶಪ್ಪ ತಿಳಿಸಿದ್ದಾರೆ.
ಈ ಸಮಾರಂಭದಲ್ಲಿ ವಿವಿಧ ಸಂಗೀತ ಕಲಾತಂಡಗಳಿಂದ ಸಮೂಹ ಗಾಯನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

### ವೈಕುಂಠ ಏಕಾದಶಿ

» **ದಾವಣಗೆರೆ**

ತಾಲ್ಲೂಕಿನ ಶ್ರೀ ಲೋಕಿಕೆರೆ ರಸ್ತೆಯಲ್ಲಿರುವ ಯರವನಾಗ್ತಿಹಳ್ಳಿ ಕ್ಯಾಂಪ್‌ನಲ್ಲಿರುವ ಶ್ರೀ ಲಕ್ಷ್ಮಿ ವೆಂಕಟೇಶ್ವರ ಸ್ವಾಮಿ ದೇವಸ್ಥಾನದಲ್ಲಿ ವೈಕುಂಠ ಏಕಾದಶಿ ಪ್ರಯಕ್ತ ಇದೇ ದಿನಾಂಕ 23ರ ಶನಿವಾರ ಬೆಳಗಿನ ಜಾವ 3 ಗಂಟೆಯಿಂದ ವಿಶೇಷ ಪಂಚಾಮೃತ ಅಭಿಷೇಕ, ಪುಷ್ಪಾಲಂಕಾರ, ವಿಶೇಷ ಪೂಜೆ ಕಾರ್ಯಕ್ರಮಗಳನ್ನು ಏರ್ಪಡಿಸಲಾಗಿದೆ. ನಂತರ ಬೆಳಿಗ್ಗೆ 7 ರಿಂದ ಉತ್ತರ ವೈಕುಂಠ ದ್ವಾರದಿಂದ ಸ್ವಾಮಿಯ ದರ್ಶನ ನಡೆಯಲಿದೆ ಎಂದು ಸೇವಾ ಸಮಿತಿ ತಿಳಿಸಿದೆ.

**ಪ್ರಥಮ ವರ್ಷದ ಎಂಬಿಬಿಎಸ್ ವಿದ್ಯಾರ್ಥಿಗಳ ವೈಟ್ ಕೋಟ್ ಸಮಾರಂಭದಲ್ಲಿ ಕೇಂದ್ರ ಸಚಿವ ಎ.ನಾರಾಯಣಸ್ವಾಮಿ ಸಲಹೆ**

# ನಿಸ್ವಾರ್ಥ ಸೇವೆ ಸಲ್ಲಿಸುವ ವೈದ್ಯರಾಗಿ ಹೊರಹೊಮ್ಮಿ

» **ಚಿತ್ರದುರ್ಗ**

ಚಿತ್ರದುರ್ಗ ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಗೆ ಪ್ರಸಕ್ತ ಸಾಲಿನಲ್ಲಿ 150 ವಿದ್ಯಾರ್ಥಿಗಳು ವೈದ್ಯಕೀಯ ಶಿಕ್ಷಣಕ್ಕೆ ಪ್ರವೇಶ ಪಡೆದಿದ್ದು, ಭವಿಷ್ಯದಲ್ಲಿ ರಾಜ್ಯ, ರಾಷ್ಟ್ರ, ವಿಶ್ವಕ್ಕೆ ನಿಸ್ವಾರ್ಥವಾಗಿ ಸೇವೆ ಸಲ್ಲಿಸುವ ವೈದ್ಯರಾಗಿ ಹೊರಹೊಮ್ಮಬೇಕು ಎಂದು ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆ ರಾಜ್ಯ ಸಚಿವ ಎ.ನಾರಾಯಣ ಸ್ವಾಮಿ ವೈದ್ಯಕೀಯ ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ನಗರದ ತರಾಸು ರಂಗಮಂದಿರದಲ್ಲಿ ಶುಕ್ರವಾರ ಚಿತ್ರದುರ್ಗ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆ ವತಿಯಿಂದ ಹಮ್ಮಿಕೊಂಡಿದ್ದ 2023–24ನೇ ಶೈಕ್ಷಣಿಕ ಸಾಲಿನ ಎಂಬಿಬಿಎಸ್ ವಿದ್ಯಾರ್ಥಿಗಳಿಗೆ ವೈಟ್ ಕೋಟ್ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ವಿಶ್ವ ಆರೋಗ್ಯ ಸಂಸ್ಥೆಯ ಪ್ರಕಾರ ಪ್ರತಿ ಸಾವಿರ ಮಂದಿಗೆ ಒಬ್ಬ ವೈದ್ಯರು ಇರಬೇಕು. ಆದರೆ ದೇಶದಲ್ಲಿ 800 ಮಂದಿಗೆ ಒಬ್ಬ ವೈದ್ಯರು ಇದ್ದಾರೆ. ನರೇಂದ್ರ ಮೋದಿ ಅವರು ಪ್ರಧಾನಿ ಆದ ನಂತರ 60 ಸಾವಿರ ವಿದ್ಯಾರ್ಥಿಗಳನ್ನು ವೈದ್ಯಕೀಯ ಕ್ಷೇತ್ರದ ಪ್ರವೇಶಕ್ಕೆ ಅವಕಾಶ ಕಲ್ಪಿಸಿದ್ದಾರೆ ಎಂದು ತಿಳಿಸಿದರು.



ವಿಶ್ವ ಆರೋಗ್ಯ ಸಂಸ್ಥೆಯ ನಿಯಮಕ್ಕಿಂತಲೂ ನಮ್ಮ ದೇಶದಲ್ಲಿ ವೈದ್ಯರ ಸಂಖ್ಯೆ ಜಾಸ್ತಿ ಇದೆ. ಆದರೆ ಈ ದೇಶದ ಜನರಿಗೆ ವೈದ್ಯಕೀಯ ಸೇವೆಯ ವೆಚ್ಚವೂ ಜಾಸ್ತಿಯಾಗುತ್ತಿದೆ. ಇದಕ್ಕೆ ನಮಲ್ಲಿ ಮೌಲ್ಯಗಳ ಕುಸಿತ, ಸಾಮಾಜಿಕ ಕಳಕಳಿ ಇಲ್ಲದೇ ಇರುವುದೇ ಪ್ರಮುಖ ಕಾರಣವಾಗಿದೆ. ಯಾವುದೇ ವೃತ್ತಿಯಲ್ಲಿ ನೈತಿಕತೆ ಇರಬೇಕು. ನೈತಿಕತೆ ಇಲ್ಲದ ವೃತ್ತಿ ವೃತ್ತಿಯೇ ಅಲ್ಲ ಎಂದು ಹೇಳಿದರು.

ವಿಧಾನಪರಿಷತ್ ಸದಸ್ಯ ಕೆ.ಎಸ್.ನವೀನ್ ಮಾತನಾಡಿ,ವೈದ್ಯರಲ್ಲಿ ದೇವರನ್ನು ಕಾಣುವ ಪರಂಪರೆ ಭಾರತೀಯ ಸಂಸ್ಕೃತಿಯಲ್ಲಿ ಹಿಂದಿನಿಂದಲೂ ಪಾಲಿಸಿಕೊಂಡು ಬರಲಾಗುತ್ತಿದೆ.

ರೋಗಿಗಳ ಪ್ರಾಣವನ್ನು ಉಳಿಸುವ ನಿಟ್ಟಿನಲ್ಲಿ ಮಾನವೀಯತೆ, ಪ್ರಾಮಾಣಿಕತೆಯಿಂದ ಸೇವೆ ಸಲ್ಲಿಸಿದರೆ ಹೆಸರು, ಕೀರ್ತಿ, ಹಣವೂ ಸಿಗಲಿದೆ. ಕೇವಲ ಹಣದ ಹಿಂದೆ ಹೋಗಬಾರದು ಎಂದು ಕಿವಿಮಾತು ಹೇಳಿದರು.

ಜಿಲ್ಲೆಯ ಜನರು ಹಾಗೂ ಜನಪ್ರತಿನಿಧಿಗಳ ಅನೇಕ ವರ್ಷಗಳ ಹೋರಾಟದ ಫಲವಾಗಿ ಚಿತ್ರದುರ್ಗ ಜಿಲ್ಲೆಗೆ ಸರ್ಕಾರಿ ವೈದ್ಯಕೀಯ ಕಾಲೇಜು ಹಾಗೂ ಸಂಶೋಧನಾ ಸಂಸ್ಥೆ ಮಂಜೂರಾಗಿದೆ. ಇಲ್ಲಿ ಪ್ರವೇಶ ಪಡೆದ ವೈದ್ಯಕೀಯ ವಿದ್ಯಾರ್ಥಿಗಳು ವಿಶ್ವದ ಎಲ್ಲ ಕಡೆಗಳಲ್ಲಿಯೂ ಚಿತ್ರದುರ್ಗ ಜಿಲ್ಲೆಗೆ ಕೀರ್ತಿ ತರಬೇಕು ಎಂದರು. ಚಿತ್ರದುರ್ಗ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆ ವಿಶೇಷಾಧಿಕಾರಿ ಡಾ.ಬಿ.ವೈ.ಯುವರಾಜ್ ಮಾತನಾಡಿ, ಎಂಬಿಬಿಎಸ್ ವಿದ್ಯಾರ್ಥಿಗಳಿಗೆ ವೈಟ್‌ಕೋಟ್ ಸಮಾರಂಭವು ವಿದ್ಯಾರ್ಥಿಗಳಿಗೆ ವೈದ್ಯಕೀಯ ವೃತ್ತಿ ಅಂಗೀಕಾರದ ವಿಧಿಯಾಗಿದೆ. ಇದು ವೈದ್ಯಕೀಯ ವಿದ್ಯಾರ್ಥಿಗಳ ವೈದಕೀಯ ವೃತ್ತಿಗೆ ಪ್ರವೇಶ ಸೂಚಿಸುತ್ತದೆ ಎಂದು ಹೇಳಿದರು. ಇದೇ ಸಂದರ್ಭದಲ್ಲಿ ರಾಷ್ಟ್ರೀಯ ವೈದ್ಯಕೀಯ ಆಯೋಗದನ್ವಯ ಮಹರ್ಷಿ ಚರಕ ಶಪಥವನ್ನು ಚಿತ್ರದುರ್ಗ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆ ವಿಶೇಷಾಧಿಕಾರಿ ಡಾ.ಬಿ.ವೈ.ಯುವರಾಜ್ ವೈದ್ಯಕೀಯ ವಿದ್ಯಾರ್ಥಿಗಳಿಗೆ ಬೋಧಿಸಿದರು. ಸಮಾರಂಭದ ಅಂಗವಾಗಿ ಪ್ರತಿ ಎಂಬಿಬಿಎಸ್ ವಿದ್ಯಾರ್ಥಿ ಇದೇ ಸಂದರ್ಭದಲ್ಲಿ ಬಿಳಿ ಕೋಟ್ ಧರಿಸಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಜೆ.ಪಿ.ರೇಣುಪ್ರಸಾದ್, ಜಿಲ್ಲಾ ಶಸಚಿಕಿತ್ಸಕ ಡಾ.ಎಸ್.ಪಿ. ರವೀಂದ್ರ, ಚಿತ್ರದುರ್ಗ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆಯ ಮುಖ್ಯ ಲೆಕ್ಕಾಧಿಕಾರಿ ಹಾಗೂ ಆರ್ಥಿಕ ಸಲಹೆಗಾರ ವಿ.ಮಹೇಶ್, ಉಪನ್ಯಾಸಕರಾದ ಡಾ.ಪ್ರಕಾಶ್, ಡಾ.ಸಾಗರ್, ಡಾ.ಶ್ರೀನಿವಾಸ್ ಸೇರಿದಂತೆ ಎಂಬಿಬಿಎಸ್ ಪ್ರಥಮ ವರ್ಷದ ವಿದ್ಯಾರ್ಥಿಗಳು ಇದ್ದರು.

**ಜಿಲ್ಲೆಯ ವಿವಿಧೆಡೆ ಅಲ್ಟ್ರಾಸೌಂಡ್ ಸ್ಕ್ಯಾನಿಂಗ್ ಸೆಂಟರ್‌ಗಳಿಗೆ ದಿಢೀರ್ ಭೇಟಿ, ಪರಿಶೀಲನೆ**

# ನ್ಯೂನತೆ ಸರಿಪಡಿಸಿಕೊಳ್ಳಲು ಸೂಚನೆ

» **ಚಿತ್ರದುರ್ಗ**

ಪ್ರಸವಪೂರ್ವ ಮತ್ತು ಗರ್ಭಪೂರ್ವ ಭ್ರೂಣಲಿಂಗ ಪತ್ತೆ ನಿಷೇಧ ಕಾಯ್ದೆ (ಪಿಸಿ & ಪಿಎನ್‌ಡಿಟಿ) ಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಜಿಲ್ಲಾ ತಪಾಸಣಾ ಮತ್ತು ಪರಿಶೀಲನಾ ಸಮಿತಿಯು ಪಿಸಿ&ಪಿಎನ್‌ಡಿಟಿ ತಂಡದೊಂದಿಗೆ ಜಿಲ್ಲೆಯ ವಿವಿಧೆಡೆ ಅಲ್ಟ್ರಾಸೌಂಡ್ ಸ್ಕ್ಯಾನಿಂಗ್ ಸೆಂಟರ್‌ಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿತು, ಅಲ್ಲದೆ ಅಲ್ಲಿ ಕಂಡುಬಂದ ಕೆಲವು ನ್ಯೂನತೆಗಳನ್ನು ಸರಿಪಡಿಸಿಕೊಳ್ಳಲು ಸೂಚನೆ ನೀಡಿತು.




ಪಿಸಿ&ಪಿಎನ್‌ಡಿಟಿ ಕಾಯ್ದೆ ಅನುಷ್ಠಾನ ಸಂಬಂಧ ಜಿಲ್ಲಾ ತಪಾಸಣಾ ಮತ್ತು ಪರಿಶೀಲನಾ ಸಮಿತಿಯ ಅಧ್ಯಕ್ಷರಾದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ರೇಣುಪ್ರಸಾದ್ ಹಾಗೂ ಸಮಿತಿಯ ಸದಸ್ಯರಾದ ಡಾ. ಸತ್ಯನಾರಾಯಣ ಅವರು ಚಿತ್ರದುರ್ಗ ನಗರದ ಗುರು ಕೊಟ್ಟೂರೇಶ್ವರ ಸ್ಕ್ಯಾನಿಂಗ್ ಸೆಂಟರ್ ಮತ್ತು ಖುಷಿ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಗೆ ಭೇಟಿ ನೀಡಿ, ಇದುವರೆಗೂ ಸ್ಕ್ಯಾನಿಂಗ್ ಮಾಡಿರುವ ಪ್ರಕರಣಗಳ ಬಗ್ಗೆ ದಾಖಲಾತಿ ಮತ್ತು ವಹಿ, ಎಂ.ಟಿ.ಪಿ. ದಾಖಲಾತಿಯನ್ನು ಸಮರ್ಪಕವಾಗಿ ನಿರ್ವಹಿಸುವಂತೆ ಸೂಚನೆ ನೀಡಿದರು. ಸ್ಕ್ಯಾನಿಂಗ್ ಸೆಂಟರ್‌ಗಳಲ್ಲಿ ಕಾಯ್ದೆಯನುಸಾರ "ಭ್ರೂಣ ಲಿಂಗವನ್ನು ಬಹಿರಂಗ ಪಡಿಸುವುದು ಕಾನೂನಿನ ಮೇರೆಗೆ ನಿಷೇಧಿಸಲಾಗಿದೆ" ಎಂಬುದಾಗಿ ಕನ್ನಡ ಮತ್ತು ಇಂಗ್ಲೀಷ್ ಭಾಷೆಯಲ್ಲಿ ಸೂಚನೆಯುಳ್ಳ ಫಲಕವನ್ನು ಸಾರ್ವಜನಿಕರ ಮಾಹಿತಿಗಾಗಿ ಕಾಣುವ ರೀತಿಯಲ್ಲಿ ಪ್ರದರ್ಶಿಸಬೇಕು. ಸ್ಕ್ಯಾನಿಂಗ್ ಮಾಡಲಾಗುವ ಕೊಠಡಿ ಒಳಗೆ ಚಿಕಿತ್ಸಾ ದರ ಪಟ್ಟಿಯನ್ನು ಸಾರ್ವಜನಿಕರಿಗೆ ಕಾಣುವಂತೆ ಪ್ರದರ್ಶಿಸಬೇಕು, ನೊಂದಣಿ ರಿಜಿಸ್ಟರ್ ಮತ್ತು ಶಿಫಾರಸು ಚೀಟಿಗಳನ್ನು ಸಮರ್ಪಕವಾಗಿ ದಾಖಲಿಸಿ ನಿರ್ವಹಿಸಬೇಕು. ಪಿಸಿ & ಪಿಎನ್‌ಡಿಟಿ ಕಾಯ್ದೆ 1994 ಮತ್ತು ತಿದ್ದುಪಡಿಗಳ ಕಾಯ್ದೆ ಪುಸ್ತಕವನ್ನು ಸೆಂಟರ್‌ನಲ್ಲಿ ಇಡಬೇಕು. ಎಂದು ಸೂಚನೆ ನೀಡಿದರು.

ಹೊಸದುರ್ಗದ ವಿನಾಯಕ ಸ್ಕ್ಯಾನಿಂಗ್ ಸೆಂಟರ್, ವಿನಾಯಕ ಹಾಸ್ಪಿಟಲ್, ಮಾರುತಿ ನರ್ಸಿಂಗ್ ಹೋಂ, ಶಾರದ ನಸಿಂಗ್ ಹೋಂ ಗಳಿಗೆ ದಿಢೀರ್ ಭೇಟಿ ನೀಡಿದ ಸಮಿತಿಯ ತಂಡವು, ಇಲ್ಲಿಯೂ ಕಂಡ ಕೆಲವು ನ್ಯೂನತೆಗಳನ್ನು ಸರಿಪಡಿಸಲು ಸೂಚನೆ ನೀಡಿತು. ಪಿ.ಸಿ.ಪಿ.ಎನ್.ಡಿ.ಟಿ. ಕಾಯ್ದೆ 1994 ಮತ್ತು ತಿದ್ದುಪಡಿಗಳ ಕಾಯ್ದೆ ಪುಸ್ತಕವನ್ನು ಇಡುವುದು, ಮಾಹಿತಿ ಫಲಕ ಅಳವಡಿಸುವುದು, ಸ್ಕ್ಯಾನಿಂಗ್‌ಗೆ ಸಂಬಂಧಿಸಿದ ಸಂಪೂರ್ನ ಮಾಹಿತಿ ಇಟ್ಟುಕೊಳ್ಳುವುದು, ಪ್ರಸೂತಿ ಮತ್ತು ಹೆರಿಗೆ ತಜ್ಞರ ಭೇಟಿ ಸಮಯವನ್ನು ಸಾರ್ವಜನಿಕರಿಗೆ ಕಾಣಿಸುವಂತೆ ಪ್ರದರ್ಶಿಸುವುದು, ಎಂ.ಟಿ.ಪಿ. ಗೆ ಸಂಬಂಧಿಸಿದ ಎಲ್ಲ ದಾಖಲಾತಿಯನ್ನು ಇರಿಸುವಂತೆ ನಿರ್ದೇಶನ ನೀಡಿತು.

ಬರುವ ದಿನಗಳಲ್ಲಿ ಸಮಿತಿಯು ನಿಯಮಾನುಸಾರ ಸ್ಕ್ಯಾನಿಂಗ್ ಸೆಂಟರ್‌ಗಳಿಗೆ ಆಕಸ್ಮಿಕ ಭೇಟಿ ನೀಡಿ ಪರಿಶೀಲನೆ ನಡೆಸಲಿದ್ದು, ಸ್ಕ್ಯಾನಿಂಗ್ ಸೆಂಟರ್‌ಗಳು ಪಿಸಿ & ಪಿಎನ್‌ಡಿಟಿ ಕಾಯ್ದೆಯಲ್ಲಿನ ಎಲ್ಲ ಅಂಶಗಳನ್ನು ಚಾಚುತಪ್ಪದೆ ಪಾಲಿಸುವಂತೆ ಅಧಿಕಾರಿಗಳು ಸೂಚನೆ ನೀಡಿದರು.

# ಈಡಿಗ ಸಮಾಜ ಎಸ್ಟಿಗೆ ಸೇರಿಸಲು ಆಗ್ರಹ



» **ಚಿತ್ರದುರ್ಗ**

ಈಡಿಗ ಸಮುದಾಯವನ್ನು ಪರಿಶಿಷ್ಟ ಜಾತಿಗೆ ಸೇರ್ಪಡೆ ಮಾಡಬೇಕು, ಬ್ರಹ್ಮಶ್ರೀ ನಾರಾಯಣ ಗುರು ಈಡಿಗ ಅಭಿವೃದ್ಧಿ ನಿಗಮಕ್ಕೆ 500 ಕೋಟಿ ಬಿಡುಗಡೆ ಸೇರಿದಂತೆ ವಿವಿಧ 16 ಬೇಡಿಕೆ ಈಡೇರಿಸಲು ಆಗ್ರಹಿಸಿ ಈಡಿಗ ಸಮಾಜದಿಂದ ನಗರದ ಜಿಲ್ಲಾಧಿಕಾರಿಗಳ ಕಚೇರಿ ವೃತ್ತದಲ್ಲಿ ಶುಕ್ರವಾರ ಉಪವಾಸ ಸತ್ಯಾಗ್ರಹವನ್ನು ನಡೆಸಲಾಯಿತು.

ನಗರದ ಅಂಬೇಡ್ಕರ್ ವೃತ್ತದಿಂದ ಜಿಲ್ಲಾಧಿಕಾರಿ ಕಚೇರಿವರೆಗೆ ಸಮಾಜದ ಸ್ವಾಮೀಜಿ ಪ್ರಣವಾನಂದ ಶ್ರೀ ನೇತೃತ್ವದಲ್ಲಿ ಪ್ರತಿಭಟನಾ ಮೆರವಣಿಗೆ ನಡೆಸಿದ ಸಮಾಜ ಬಾಂಧವರು ನಂತರ ಜಿಲ್ಲಾಡಳಿತದ ಮುಖಾಂತರ ಮುಖ್ಯಮಂತ್ರಿಗಳಿಗೆ ಸಮಾಜದ ಬೇಡಿಕೆಗಳನ್ನು ಒಳಗೊಂಡ ಮನವಿಪತ್ರವನ್ನು ಸಲ್ಲಿಸಿದರು.

ಈ ವೇಳೆ ಮಾತನಾಡಿದ ಪ್ರಣವಾನಂದ ಸ್ವಾಮೀಜಿ, ಈಡಿಗ ಸಮಾಜದ ಕುಲಶಾಸ್ತ್ರ ಅಧ್ಯಯನಕ್ಕಾಗಿ ಹಿಂದಿನ ಬಿಜೆಪಿ ಸರ್ಕಾರ ಘೋಷಿಸಿದ್ದ ಹಣವನ್ನು ಬಳಸಿಕೊಂಡು, ತಕ್ಷಣವೇ ಸಮಾಜದ ಕುಲಶಾಸ್ತ್ರ ಅಧ್ಯಯನ ಮಾಡಬೇಕು. ಈಡಿಗ ಸಮಾಜವನ್ನು ಪರಿಶಿಷ್ಟ ಪಂಗಡಕ್ಕೆ ಸೇರ್ಪಡೆ ಮಾಡಲು ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಬೇಕು. ಬ್ರಹ್ಮಶ್ರೀ ನಾರಾಯಣ ಗುರು ಈಡಿಗ ಅಭಿವೃದ್ಧಿ ನಿಗಮಕ್ಕೆ ತಕ್ಷಣೇ 500 ಕೋಟಿ ರೂ ಅನುದಾನ ನೀಡಬೇಕೆಂದು ಆಗ್ರಹಿಸಿದರು.

ಅನಾದಿಯಿಂದಲೂ ಕುಲ ಕಸುಬನ್ನೇ ನೆಚ್ಚಿಕೊಂಡು ಬಂದ ಸಮುದಾಯ ನಮ್ಮದು. ನಮ್ಮ ಸಮಾಜಕ್ಕೆ ಮರಳಿ ಕಸುಬು ನೀಡಬೇಕು. ಕಸುಬನ್ನು ಕಳೆದುಕೊಂಡ ಪ್ರತಿ ಕುಟುಂಬಕ್ಕೂ 2 ಎಕರೆ ಜಮೀನನ್ನು ಮಂಜೂರು ಮಾಡಿ, ಜೀವನಕ್ಕೆ ಆಧಾರ ಕಲ್ಪಿಸಬೇಕು. ರಾಜ್ಯದಲ್ಲಿ ಈಡಿಗ ಸಮುದಾಯದ ನಿರ್ಗತಿಕರಿಗೆ ಮನೆ ಹಾಗೂ ನಿವೇಶನ ಮಂಜೂರು ಮಾಡಬೇಕು. ಬೆಂಗಳೂರಿನಲ್ಲಿ ವಿಧಾನಸೌಧದ ಮುಂಭಾಗದಲ್ಲಿ ಬ್ರಹ್ಮಶ್ರೀ ನಾರಾಯಣ ಗುರುಗಳ ಪುತ್ಥಳಿಯನ್ನು ಪ್ರತಿಷ್ಠಾಪಿಸಬೇಕು ಎಂದು ಒತ್ತಾಯಿಸಿದರು.

ಉಪವಾಸ ಸತ್ಯಾಗ್ರಹ ಸ್ಥಳಕ್ಕೆ ವಿಧಾನ ಪರಿಷತ್ ಸದಸ್ಯರಾದ ಕೆ.ಎಸ್.ನವೀನ್ ಭೇಟಿ ನೀಡಿ ಮಾತನಾಡಿ, ನಿಮ್ಮ ಹೋರಾಟಕ್ಕೆ ನನ್ನ ಬೆಂಬಲ ಇದೆ. ನಿಮ್ಮ ಪರವಾಗಿ ವಿಧಾನ ಪರಿಷತ್‌ನಲ್ಲಿ ಮಾತನಾಡುತ್ತೇನೆ, ನಿಮ್ಮ ಬೇಡಿಕೆಗಳು ಸಹಜವಾಗಿದೆ, ಅವುಗಳನ್ನು ಈಡೇರಿಸುವಲ್ಲಿ ಸರ್ಕಾರ ಮುಂದಾಗಬೇಕಿದೆ. ರಾಜ್ಯಕ್ಕೆ ಈಡಿಗ ಸಮುದಾಯ ಕೊಡುಗೆ ಬಹಳ ಇದೆ.



ಅಖಿಲ ಭಾರತ ವೀರಶೈವ–ಲಿಂಗಾಯಿತ ಮಹಾಸಭಾ ಅಧಿವೇಶನದ ಅಂಗವಾಗಿ ನಗರದಲ್ಲಿ ಬೈಕ್‌ರ್ಯಾಲಿ.

## ಪ್ರಮುಖ ಸುದ್ದಿ

# ಸಂಸದ ಸಸ್ಪೆಂಡ್: ಕೇಂದ್ರದ ವಿರುದ್ಧ ಕಾಂಗ್ರೆಸ್ ಪ್ರತಿಭಟನೆ

» **ಚಿತ್ರದುರ್ಗ**

ಸಂಸತ್‌ನಲ್ಲಿ ವಿರೋಧ ಪಕ್ಷದ 141 ಸಂಸದರನ್ನು ಅವಮಾನತ್ತುಗೊಳಿಸಿರುವುದನ್ನು ವಿರೋಧಿಸಿ ಜಿಲ್ಲಾ ಕಾಂಗ್ರೆಸ್ ವತಿಯಿಂದ ಕೇಂದ್ರ ಸರ್ಕಾರದ ವಿರುದ್ಧ ಶುಕ್ರವಾರ ಪ್ರತಿಭಟನೆ ಹಮ್ಮಿಕೊಳ್ಳಲಾಗಿತ್ತು.

ಜಿಲ್ಲಾ ಕಾಂಗ್ರೆಸ್ ಕಚೇರಿ ಮುಂಭಾಗ ನಡೆದ ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡಿದ ಮಾಜಿ ಸಚಿವ ಹೆಚ್. ಆಂಜನೇಯ ಪಾರ್ಲಿಮೆಂಟ್ ಎಂದರೆ ಪ್ರಜೆಗಳ ಪವಿತ್ರ ಮಂದಿರವಿದ್ದಂತೆ. ಸಂಸದ ಪ್ರತಾಪ್‌ಸಿಂಹರಿಂದ ಪಾಸ್ ಪಡೆದು ಸಂಸತ್ ಒಳಗೆ ನುಗ್ಗಿದವರು ಹೊಗೆ ಬಾಂಬ್ ಸಿಡಿಸಿರುವುದನ್ನು ನೋಡಿದರೆ ಪ್ರಧಾನಿ ಮೋದಿಯವರಿಂದ ಪ್ರಜಾಪ್ರಭುತ್ವದ ಕಗ್ಗೊಲೆಯಾಗಿದೆ. ಧರ್ಮ ಧರ್ಮಗಳ ನಡುವೆ ಸಂಘರ್ಷವಿಟ್ಟು ಅಧಿಕಾರದ ಚುಕ್ಕಾಣಿ ಹಿಡಿದಿರುವ ಬಿಜೆಪಿ.ಗೆ ಪ್ರಜಾಪ್ರಭುತ್ವದಲ್ಲಿ ನಂಬಿಕೆಯಿಲ್ಲದಂತಾಗಿದೆ. ಗರೀಬಿ ಹಠಾವೋ ಜಾರಿಗೆ ತಂದಿದ್ದು, ಕಾಂಗ್ರೆಸ್ ಸರ್ಕಾರ. ಸರ್ವಾಧಿಕಾರಿಯಂತೆ ವರ್ತಿಸುತ್ತಿರುವ ಪ್ರಧಾನಿ ಮೋದಿ ಅದಾನಿ, ಅಂಬಾನಿ ಪರವಾಗಿದ್ದಾರೆ. ಸಿಬಿಐ, ಇಡಿ, ಆದಾಯ ತೆರಿಗೆ ಇಲಾಖೆಯನ್ನು ದುರ್ಬಳಕೆ ಮಾಡಿಕೊಳ್ಳುತ್ತಿವೆ. ಬಿಜೆಪಿ.ಯಲ್ಲಿ ಹಗರಣವಾಗಿಲ್ಲವೆ? ಎಂದು ಪ್ರಶ್ನಿಸಿದ ಹೆಚ್.ಆಂಜನೇಯ ದೇಶದಲ್ಲಿ ಅಮಾಯಕರಿಗೆ ರಕ್ಷಣೆ ಇಲ್ಲದಂತಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.




ಮಾಜಿ ಸಂಸದ ಬಿ.ಎನ್.ಚಂದ್ರಪ್ಪ ಮಾತನಾಡಿ ಸಂಸತ್‌ನಲ್ಲಿ ಭದ್ರತಾ ಲೋಪವಾಗಿರುವುದನ್ನು ವಿರೋಧಿಸಿ ನ್ಯಾಯ ಕೇಳಿದ ಸಂಸದರುಗಳನ್ನು ಹೊರಗಟ್ಟುವ ಕೆಲಸ ಮಾಡಿದೆ. ವರ್ಷಕ್ಕೆ ಎರಡು ಕೋಟಿ ಯುವಕರಿಗೆ ಉದ್ಯೋಗ ನೀಡುವುದಾಗಿ ಸುಳ್ಳು ಭರವಸೆ ನೀಡಿ ಅಧಿಕಾರಕ್ಕೆ ಬಂದಿರುವ ಮೋದಿ ಇದುವರೆವಿಗೂ ಇಪ್ಪತ್ತು ಕೋಟಿ ಯುವಕರಿಗೆ ಉದ್ಯೋಗ ನೀಡಬೇಕಿತ್ತು. ಸಂಸದ ಪ್ರತಾಪಸಿಂಹ ಶಿಫಾರಸ್ಸು ಪತ್ರ ಪಡೆದು ಒಳಗೆ ಹೋದ ನಿರುದ್ಯೋಗಿ ಯುವಕರು ಮೋದಿ ವಿರುದ್ಧ ಧಿಕ್ಕಾರಗಳನ್ನು ಕೂಗಿದ್ದಾರೆ. ಕಾನೂನು ರೂಪಿಸುವ ಸಂಸತ್‌ಗೆ ರಕ್ಷಣೆ ಕೊಡಲಾಗದೆ ಪ್ರಧಾನಿ ಮೋದಿಯಿಂದ ದೇಶದ ಜನಸಾಮಾನ್ಯರಿಗೆ ಯಾವ ರೀತಿ ರಕ್ಷಣೆ ನೀಡಬಲ್ಲರು ಎನ್ನುವುದನ್ನು ದೇಶದ ಜನ ಎದುರು ನೋಡುತ್ತಿದ್ದಾರೆಂದರು.

ಬಡವರಿಗೆ, ಕೃಷಿಕರಿಗೆ, ರೈತರಿಗೆ, ಕಾರ್ಮಿಕರಿಗೆ ಕೇಂದ್ರ ಸರ್ಕಾರ ಮೋಸ ಮಾಡುತ್ತಿದೆ. ಕಳೆದ ಚುನಾವಣೆಯಲ್ಲಿ ಸರ್ಜಿಕಲ್ ಸ್ಟ್ರೈಕ್ ಹೆಸರೇಳಿಕೊಂಡು ಮೋದಿ ಎರಡನೆ ಬಾರಿಗೆ ದೇಶದ ಪ್ರಧಾನಿಯಾದರು. 141 ಸಂಸದರ ಅಮಾನತ್ತು ಹಿಂದಕ್ಕೆ ಪಡೆದು ದೇಶದ ಜನರ ಕ್ಷಮೆ ಕೇಳಬೇಕು ಎಂದು ಬಿ.ಎನ್. ಚಂದ್ರಪ್ಪ ಒತ್ತಾಯಿಸಿದರು.

ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಅಸಂಘಟಿತ ಕಾರ್ಮಿಕ ವಿಭಾಗದ ರಾಜ್ಯಾಧ್ಯಕ್ಷ ಜಿ.ಎಸ್.ಮಂಜುನಾಥ್ ಮಾತನಾಡುತ್ತ ಪ್ರಧಾನಿ ನಡವಳಿಕೆ ವಿರೋಧಿಸಿ ದೆಹಲಿಯಲ್ಲಿ ನಡೆಯುತ್ತಿರುವ ನಾಟಕೀಯ ಬೆಳವಣಿಗೆಯ ಹಿಂದಿರುವ ಪರದೆಯನ್ನು ದೇಶದ ಜನ ಅರ್ಥಮಾಡಿಕೊಳ್ಳಬೇಕು. ಕಳೆದ 16 ರಂದು ಸಂಸತ್‌ನೊಳಗೆ ಮೂವರು ಯುವಕರು ಅನಾಮದೇಯವಾಗಿ ಪ್ರವೇಶಿಸಿದ್ದನ್ನು ದೇಶದ ಜನ ನೋಡಿದ್ದಾರೆ. ಪ್ರವೇಶಿಸಿದವರ ಕೈಯಲ್ಲಿ ಹೊಗೆ ಬಾಂಬ್ ಬಿಟ್ಟರೆ ಯಾವುದೇ ಆಯುಧವಿರಲಿಲ್ಲ. ಮೋದಿ ಪ್ರಧಾನಿಯಾಗಿ ಹತ್ತು ವರ್ಷವಾಯಿತು. ಒಂದು ಉದ್ಯೋಗವು ಸೃಷ್ಠಿಯಾಗಿಲ್ಲ. ಪದವೀಧರ ನಿರುದ್ಯೋಗಿಗಳು ಸಂಸತ್‌ನಲ್ಲಿ ನುಗ್ಗಿ ಪ್ರಧಾನಿ ಮೋದಿ ವಿರುದ್ಧ ಧಿಕ್ಕಾರಗಳನ್ನು ಕೂಗಿರುವುದು ದೇಶದ್ರೋಹದ ಕೆಲಸವಲ್ಲ ಎಂದು ಪ್ರಶ್ನಿಸಿದ ಸಂಸದರನ್ನು ಅಮಾನತ್ತುಗೊಳಿಸಿರುವುದು ಯಾವ ನ್ಯಾಯ?

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T